# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 250 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 24–04–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 250 | Title- Code: KARKAN 28269 | Chitradurga | Date: 24-04-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪ್ಲಾಸ್ಟಿಕ್ ಬಳಕೆಗೆ ಬ್ರೇಕ್ ಹಾಕಿ ಭೂಮಿ ರಕ್ಷಿಸಿ: ನ್ಯಾಯಾಧೀಶೆ ಕೆ.ಬಿ.ಗೀತಾ ಕರೆ 2

ಬಿಜೆಪಿ ಕಾರಜೋಳ ಪರ ಕಾಂತರಾಜ್ ಮತಯಾಚನೆ 3

ಸುಳ್ಳು ಆಶ್ವಾಸನೆ ನೀಡುವ ಬಿಜೆಪಿಯನ್ನು ಜನತೆ ಅಧಿಕಾರಿದಿಂದ ದೂರವಿಡಬೇಕು 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಜಾತಿ ಧರ್ಮದ ಹೆಸರಿನಲ್ಲಿ ಮತ ಕೇಳುವುದು ದೇಶಕ್ಕೆ ಅಪಾಯ: ಪ್ರಿಯಾಂಕಾ ಗಾಂಧಿ ಆತಂಕ

» ನಮ್ಮಜನ ಸಮಾಚಾರ

ಚಿತ್ರದುರ್ಗ : ಧರ್ಮ,ಜಾತಿಯ ಹೆಸರಿನಲ್ಲಿ ಮತ ಕೇಳುವುದು ದೇಶಕ್ಕೆ ಅಪಾಯ ಎಂದು ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಹೇಳಿದರು.

ಚಿತ್ರದುರ್ಗದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ನ್ಯಾಯ ಸಂಕಲ್ಪ ರ್ಯಾಲಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, "ಕಳೆದ ಹತ್ತು ವರ್ಷಗಳಿಂದ ಅಧಿಕಾರದಲ್ಲಿರುವ ಪ್ರಧಾನಿ ನರೇಂದ್ರ ಮೋದಿಯವರು ದೇಶದ ಬಹುಪಾಲು ಆಸ್ತಿಯನ್ನು ತಮ್ಮ ಇಬ್ಬರು ಬಂಡವಾಳಶಾಹಿ ಸ್ನೇಹಿತರಿಗೆ ಮತ್ತು ಬಹುರಾಷ್ಟ್ರೀಯ ಕಂಪನಿಗಳಿಗೆ ಮಾರಾಟಮಾಡಿ ತಾನು ದೊಡ್ಡ ಸಾಧನೆ ಮಾಡಿದ್ದೇನೆ ಎಂಬಂತೆ ಪ್ರಚಾರಪಡಿಸುತ್ತಿದ್ದಾರೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಚುನಾವಣೆ ಸಂದರ್ಭದಲ್ಲಿ ಅಭಿವೃದ್ಧಿ ಕೆಲಸಗಳನ್ನು ಹೇಳಿಕೊಂಡು ಮತ ಕೇಳುವ ಬದಲಾಗಿ ಧರ್ಮ ಮತ್ತು ಜಾತಿ ಹೆಸರಿನಲ್ಲಿ ಮತ ಕೇಳಿ ದೇಶವನ್ನು ಒಡೆಯುವ ಕೆಲಸ ಮಾಡುತ್ತಿದ್ದಾರೆಂದು ಆರೋಪಿಸಿದರು.

ಜೀವನಸಂಘರ್ಷ ಹೆಚ್ಚುತ್ತಲೇ ಸಾಗುತ್ತಿದೆ ಕೃಷಿಕರಿಗೆ ಬೆಂಬಲ ಬೆಲೆ, ಜಿಎಸ್ಟಿಯಿಂದ ಸಮಸ್ಯೆ ಆಗುತ್ತಿದೆ ಪ್ರಧಾನಿ ಮೋದಿ ದೇಶದ ಕೆಲ ಬಂಡವಾಳಶಾಹಿಗಳಿಗೆ 16ಲಕ್ಷ ಕೋಟಿ ರೂ. ಸಾಲ ಮನ್ನಾ ಮಾಡಿದ್ದಾರೆ. ಮೋದಿ ತಮ್ಮ ಗೆಳೆಯರಿಗಾಗಿ ಎಲ್ಲವನ್ನೂ ಕೊಡುತ್ತಿದ್ದಾರೆ. ದೇಶದ ಆಸ್ತಿಗಳನ್ನು ತಮ್ಮ ಸ್ನೇಹಿತರಿಗೆ ಮಾರಾಟ ಮಾಡುತ್ತಿದ್ದಾರೆ. ರೈತರು ಸಾಲದಲ್ಲಿ ಮುಳುಗುತ್ತಿದ್ದಾರೆ, ಉದ್ಯೋಗಪತಿಗಳ ಸಾಲ ಮಾತ್ರ ಮನ್ನಾ, ಯಾರು ಜನಪರ ಮಾತಾಡುತ್ತಾರೋ ಅವರ ಬಾಯಿ ಮುಚ್ಚಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾಗ್ದಾಳಿಯನ್ನು ನಡೆಸಿದರು.ಸಿಎಂ ಸಿದ್ದರಾಮಯ್ಯ ಕೇಂದ್ರದ ಬಳಿ ಅನೇಕ ಸಲ ಅನುದಾನ ಕೇಳಿದರು. ಆದರೆ ಈವರೆಗೆ ಒಂದು ಪೈಸೆ ಕೊಡಲಿಲ್ಲ. ರಾಯಚೂರಲ್ಲಿ ಏಮ್ಸ್ ನಿರ್ಮಾಣದ ಕನಸಿದೆ, ಈವರೆಗೆ ಆಗಿಲ್ಲ. ಕಳಸ ಬಂಡೂರಿ ಯೋಜನೆ ಈವರೆಗೆ ಕೇಂದ್ರದಿಂದ ಮಂಜೂರಾಗಿಲ್ಲ. ಭದ್ರಾ ಯೋಜನೆಗೆ ಕೇಂದ್ರ ಸರ್ಕಾರ ಹಣ ಕೊಡಲಿಲ್ಲ, ರಾಜ್ಯದ ತೆರಿಗೆ ಹಣ ಸಹ ನೀಡದೆ ನಷ್ಟ ಮಾಡಿದ್ದಾರೆ ಟೀಕಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿ ಜಾರಿಗೊಳಿಸಿದೆ. ಗೃಹಲಕ್ಷ್ಮೀ ಯೋಜನೆಯಿಂದ ಪ್ರತಿ ಮಹಿಳೆಗೆ 2ಸಾವಿರ ಹಣ, ಉಚಿತ ವಿದ್ಯುತ್, ಅನ್ನಭಾಗ್ಯ, ಶಕ್ತಿ ಯೋಜನೆಯಿಂದ ಉಚಿತ ಪ್ರಯಾಣ, ಯುವನಿಧಿ ಯೋಜನೆ ಇದು ಕೇವಲ ಆರಂಭ, ಕೇಂದ್ರದಲ್ಲಿ ನಮ್ಮ ಸರ್ಕಾರ ಬಂದರೆ ಪ್ರತಿ ಕುಟುಂಬದ ಮಹಿಳೆ 1ಲಕ್ಷ ಸೇರಿ ಹಲವು ಗ್ಯಾರಂಟಿಗಳನ್ನು ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮತದಾರರಿಗೆ ನೀಡುತ್ತದೆ ಎಂದು ಭರವಸೆಯನ್ನು ನೀಡಿದರು.

ಜಗತ್ತಿನ ಅತಿ ಶ್ರೀಮಂತರ ಪಟ್ಟಿಯಲ್ಲಿ ಇಬ್ಬರು ಮೋದಿ ಮಿತ್ರರಿದ್ದಾರೆ. ದೇಶದ ಗೌರವ ಹೆಚ್ಚಿದೆ ಎಂದು ಹೇಳುತ್ತಾರೆ. ಜನರಿಗೇನು ಸಿಕ್ಕಿದೆ ಹೇಳಿ ನಿಮ್ಮ ಮಕ್ಕಳಿಗೆ ಕೆಲಸ ಸಿಕ್ಕಿದೆಯೇ?, ಬೆಲೆ ಏರಿಕೆ ಕಡಿಮೆ ಆಗಿದೆಯೇ?, ಆಸ್ಪತ್ರೆ ಕಟ್ಟಿಸಿದ್ದಾರೆಯೇ?, ಏಮ್ಸ್, ಐಐಟಿ ಕಟ್ಟಿಸಿದ್ದಾರೆಯೇ? ಹತ್ತು ವರ್ಷದಲ್ಲಿ ಮೋದಿ ಏನು ಮಾಡಿದ್ದಾರೆ?. ಅಭಿವೃದ್ಧಿ ಆಧಾರದ ಮೇಲೆ ಏಕೆ ಮತ ಕೇಳುತ್ತಿಲ್ಲ ಜಾತಿ, ಧರ್ಮದ ಆಧಾರದಲ್ಲಿ ಏಕೆ ಮತ ಕೇಳುತ್ತಿದ್ದಾರೆ ಎಂದು ಪ್ರಸ್ನಿಸಿದರು.ಕಾಡುಗೊಲ್ಲ ಜನಾಂವನ್ನು ಎ▯▯ಟಿಗೆ ಸೇರಿಸಲಾಗುವುದು ಎಸ್ಸಿ, ಎಸ್ಟಿಗೆ ವಿಶೇಷ ಅನುದಾನ, ಇಡೀ ದೇಶದಲ್ಲಿ ಜಾತಿ ಗಣತಿ ಕಾಡುಗೊಲ್ಲ ಸಮಾಜವನ್ನು ಎಸ್ಟಿಗೆ ಸೇರಿಸಲಾಗುವುದು, ರೈತರಿಗೆ ಬೆಂಬಲ ಬೆಲೆ, ಕೃಷಿಗೆ ಜಿಎಸ್ಟಿ ಮುಕ್ತಗೊಳಿಸುತ್ತೇವೆ, ಭೂಮಿ ಇಲ್ಲದವರಿಗೆ ಭೂಮಿ ನೀಡುವುದು, ಬೆಳೆ ನಷ್ಟವಾದವರಿಗೆ 30ದಿನದಲ್ಲಿ ವಿಮೆ ಹಣ ಕೊಡುವ ಯೋಜನೆ ತರುತ್ತೇವೆ. ಈ ದೇಶದ ಸಂವಿಧಾನ, ಪ್ರಜಾಪ್ರಭುತ್ವ, ರೈತರು, ಸಾಮಾನ್ಯ ಜನರ ಉಳುವಿಗಾಗಿ ಕಾಂಗ್ರೆ▯▯ಗೆ ಮತ ನೀಡಿ ಎಂದರು.



## ಕರ್ನಾಟಕದಲ್ಲಿ ಮೋದಿ ಅಲೆ ಇಲ್ಲ, ಕಾಂಗ್ರೆಸ್ ಗ್ಯಾರೆಂಟಿ ಅಲೆ ಇದೆ: ಸಿಎಂ

» ಚಿತ್ರದುರ್ಗ

ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿ ಇಡಿ ದೇಶದ ರೈತರ 76 ಸಾವಿರ ಕೋಟಿ ಸಾಲ ಮನ್ನಾ ಮಾಡಿದರು. ಮೋದಿ ಪ್ರಧಾನಿಯಾಗಿ ಅತ್ಯಂತ ಶ್ರೀಮಂತರ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದರು. ಈಗ ಹೇಳಿ ಮೋದಿ ಯಾರ ಪರ ಎಂದು ಸಿ.ಎಂ.ಸಿದ್ದರಾಮಯ್ಯ ಪ್ರಶ್ನಿಸಿದರು. ಚಿತ್ರದುರ್ಗದಲ್ಲಿ ನಡೆದ ಪ್ರಜಾಧ್ವನಿ–2 ಯಾತ್ರೆಯನ್ನು ಉದ್ಘಾಟಿಸಿ ಬೃಹತ್ ಜನಸ್ತೋಮವನ್ನು ಉದ್ಘಾಟಿಸಿ ಮಾತನಾಡಿದರು. ಮೋದಿ ಹತ್ತತ್ತು ವರ್ಷ ಪ್ರಧಾನಿಯಾಗಿ ಭಾರತೀಯರಲ್ಲಿ ಭ್ರಮೆ ಹುಟ್ಟಿಸಿದ್ದು ಬಿಟ್ಟರೆ ಅಭಿವೃದ್ಧಿಯಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಪ್ರತೀ ಬಾರಿ ಭಾರತೀಯರನ್ನು ನಂಬಿಸಿ ಮೋಸ ಮಾಡೋದು ಮೋದಿಯವರಿಗೆ ರೂಢಿಯಾಗಿದೆ ಎಂದರು. ವರ್ಷಕ್ಕೆ 2 ಕೋಟಿಯಂತೆ ಹತ್ತು ವರ್ಷದಲ್ಲಿ 20 ಕೋಟಿ ಉದ್ಯೋಗ ಸೃಷ್ಟಿಮಾಡಬೇಕಿತ್ತು. ಆದರೆ 20 ಲಕ್ಷ ಉದ್ಯೋಗವನ್ನೂ ಸೃಷ್ಟಿಸದ ಮೋದಿ ಕೆಲಸ ಕೇಳಿದ ವಿದ್ಯಾವಂತರಿಗೆ ಹೋಗಿ ಪಕೋಡ ಮಾರಾಟ ಮಾಡಿ ಅಂದರು. ನನ್ನ ಕೈಗೆ ಅಧಿಕಾರ ಕೊಡಿ ವಿದೇಶದಿಂದ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಾಕ್ತೀವಿ ಅಂದ್ರು. ಹತ್ತು ವರ್ಷದಲ್ಲಿ ಹದಿನೈದು ಪೈಸೆಯನ್ನೂ ಹಾಕಲಿಲ್ಲ. ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂದೋರು ರೈತ ಖರ್ಚು ಮೂರು ಪಟ್ಟು ಮಾಡಿಟ್ಟಿದ್ದಾರೆ. ಮನಮೋಹನ್ ಸಿಂಗ್ ಅವರು ಪ್ರಧಾನಿಯಾಗಿ ಇಡಿ ದೇಶದ ರೈತರ 76 ಸಾವಿರ ಕೋಟಿ ಸಾಲ ಮನ್ನಾ ಮಾಡಿದರು. ಆದರೆ ಮೋದಿ ಅತ್ಯಂತ ಶ್ರೀಮಂತರ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದರು. ಹಾಗಾದ್ರೆ ಮೋದಿ ಯಾರ ಪರ ಎನ್ನುವುದನ್ನು ಅರ್ಥ ಮಾಡಿಕೊಳ್ಳಿ ಎಂದರು. ಮೋದಿ ಬಂದ ಮೇಲೆ ಜನ ಸಾಮಾನ್ಯರ, ಮಧ್ಯಮ ವರ್ಗದವರ ಮೇಲೆ ತೆರಿಗೆ ಭಾರ ಹೆಚ್ಚಾಯಿತು. ಉದ್ಯಮಿಗಳ ತೆರಿಗೆ ಭಾರ ಕಡಿಮೆ ಆಯಿತು. ಆದ್ದರಿಂದ ಮೋದಿ ಜನದ್ರೋಹಿ ತಾನೆ ಎಂದು ಪ್ರಶ್ನಿಸಿದರು. ಹೀಗೆ ಮೋದಿಯವರ ವೈಫಲ್ಯಗಳನ್ನು ಪಟ್ಟಿ ಮಾಡುತ್ತಾ ಹೋದರೆ ಹನುಮಂತನ ಬಾಲದಂತೆ ಬೆಳೆಯುತ್ತದೆ ಎಂದರು.

### ಕಾಡುಗೊಲ್ಲ ಸಮುದಾಯವನ್ನು ಎಸ್ಟಿಗೆ ಸೇರಿಸುವಂತೆ ನಾವು ಒತ್ತಾಯಿಸಿದ್ದರೂ ಏಕೆ ಸ್ಪಂದಿಸುತ್ತಿಲ್ಲ ಮೋದಿಯವರೇ

» ಚಿತ್ರದುರ್ಗ

ಕಾಡುಗೊಲ್ಲ ಸಮುದಾಯವನ್ನು ಖಖಿ ಗೆ ಸೇರಿಸಲು ಮೇಲದ ಮೇಲೆ ನಾವು ಕೇಂದ್ರಕ್ಕೆ ಕೇಳುತ್ತಲೇ ಇದ್ದೇವೆ. ಆದರೂ ಇದುವರೆಗೂ ಏಕೆ ಸ್ಪಂದಿಸುತ್ತಿಲ್ಲ ಮೋದಿಯವರೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಾರವಾಗಿ ಪ್ರಶ್ನಿಸಿದರು. ಇಲ್ಲಿ ನಡೆದ ಪ್ರಜಾಧ್ವನಿ–2 ಯಾತ್ರೆಯಲ್ಲಿ ಬೃಹತ್ ಜನಸಮಾವೇಶದಲ್ಲಿ ಮಾತನಾಡಿದರು. ಕಾಡುಗೊಲ್ಲ ಸಮುದಾಯವನ್ನು ಖಖಿ ಪಟ್ಟಿಗೆ ಸೇರಿಸಬೇಕು ಎನ್ನುವ ಬೇಡಿಕೆಗೆ ನಾವು ಸಂಪೂರ್ಣವಾಗಿ ಸ್ಪಂದಿಸಿದ್ದೇವೆ. ಈ ಬಗ್ಗೆ ಕೇಂದ್ರಕ್ಕೂ ಶಿಫಾರಸ್ಸು ಮಾಡಿದ್ದಾಗಿದೆ. ಆದರೆ ಈ ವರೆಗೂ ಇದಕ್ಕೆ ಏಕೆ ಸ್ಪಂದಿಸುತ್ತಿಲ್ಲ ಎಂದು ಸಿಎಂ ಪ್ರಶ್ನಿಸಿದರು.


ಪುಟ 3


**ಫಾಸ್ಟ್ ನ್ಯೂಸ್**

### ಮದ್ಯಮುಕ್ತ ಚುನಾವಣೆ ನಿಮಿತ್ತ ರುಡ್‌ಸೆಟ್ ಸಂಸ್ಥೆಯಲ್ಲಿ ಕರಪತ್ರ ಬಿಡುಗಡೆ



» ಚಿತ್ರದುರ್ಗ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಸಂಯುಕ್ತಾಶ್ರಯದಲ್ಲಿ ಮದ್ಯಮುಕ್ತ ಚುನಾವಣೆ ನಿಮಿತ್ತ ರುಡ್‌ಸೆಟ್‌ನಲ್ಲಿ ಕರಪತ್ರ ಬಿಡುಗಡೆಗೊಳಿಸಲಾಯಿತು. ಜಿಲ್ಲಾ ಜನಜಾಗೃತಿ ಸದಸ್ಯ ನಾಗರಾಜ್ ಸಂಗಮ್ ಮಾತನಾಡಿ ಮತದಾನ ಪ್ರತಿಯೊಬ್ಬರ ಹಕ್ಕು. ಯಾರೂ ಮತದಾನದಿಂದ ದೂರ ಉಳಿಯಬಾರದು. ಚುನಾವಣೆಯಲ್ಲಿ ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ಮತದಾನ ಮಾಡಿ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕಿದೆ ಎಂದು ಹೇಳಿದರು. ರುಡ್‌ಸೆಟ್ ಸಂಸ್ಥೆ ನಿರ್ದೇಶಕಿ ಶ್ರೀಮತಿ ರಾಧಾ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ, ಕಿರಣ್ ಶಂಕರ್, ಶಾಂತ ಅಶೋಕ್, ತಾಲ್ಲೂಕು ಯೋಜನಾಧಿಕಾರಿ ಬಿ.ಅಶೋಕ್, ರವಿಚಂದ್ರ, ನವಜೀವನ ಸಮಿತಿಯ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಸಿಎಂ ಯೋಗಿ ಇಂದಿನ ಸಭೆ ರದ್ದು

» ಚಿತ್ರದುರ್ಗ

ಚಿತ್ರದುರ್ಗ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಪರವಾಗಿ ಚುನಾವಣಾ ಪ್ರಚಾರಕ್ಕಾಗಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಏಪ್ರಿಲ್ 24 ರಂದು ಚಿತ್ರದುರ್ಗಕ್ಕೆ ಆಗಮಿಸುವ ಕಾರ್ಯಕ್ರಮ ನಿಗಧಿಯಾಗಿತ್ತು. ಆದರೆ, ಈಗ ಕಾರಣಾಂತರಗಳಿಂದ ಕಾರ್ಯಕ್ರಮ ರದ್ದಾಗಿದೆ ಎಂದು ಜಿಲ್ಲಾ ಬಿಜೆಪಿ ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್ ತಿಳಿಸಿದ್ದಾರೆ. ಉತ್ತರ ಪ್ರದೇಶ ಮುಖ್ಯಮಂತ್ರಿ, ಬಿಜೆಪಿಯ ಫೈರ್ ಬ್ರಾಂಡ್ ಯೋಗಿ ಆದಿತ್ಯನಾಥ್ ಅವರ ಕಾರ್ಯಕ್ರಮ ರದ್ದಾಗಿದೆ. ಕರ್ನಾಟಕದ ಚಿತ್ರದುರ್ಗ, ಮಡಿಕೇರಿ, ಉಡುಪಿ ಹಾಗೂ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರಗಳಲ್ಲಿ ನಾಳೆ ಯೋಗಿ ಆದಿತ್ಯನಾಥ್ ಚುನಾವಣಾ ಪ್ರಚಾರ ಸಭೆಗಳನ್ನು ಆಯೋಜಿಸಲಾಗಿತ್ತು. ಏಪ್ರಿಲ್ 24 ರಂದು ಬೆಳಗ್ಗೆ 11 ಗಂಟೆಗೆ ನಗರದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಹಳೇ ಮಾಧ್ಯಮಿ ಶಾಲಾ ಆವರಣದವರೆಗೆ ಯೋಗಿ ಆದಿತ್ಯನಾಥ್ ರೋಡ್ ಶೋ ನಡೆಸಲು ಆರಂಭದಲ್ಲಿ ಯೋಜನೆ ರೂಪಿಸಲಾಗಿತ್ತು. ಆನಂತರ, ರೋಡ್ ಶೋ ರದ್ದು ಮಾಡಿ, ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಸಮಾವೇಶ ನಡೆಸಿ, ಕಾರ್ಯಕರ್ತರು, ಜಿಲ್ಲೆಯ ನಾಗರೀಕರನ್ನು ಉದ್ದೇಶಿಸಿ ಮಾತನಾಡಲು ಕಾರ್ಯಕ್ರಮ ರೂಪಿಸಲಾಗಿತ್ತು. ಆದರೆ, ಈಗ ಇಡೀ ಕಾರ್ಯಕ್ರಮವೇ ರದ್ದಾಗಿದ್ದು, ನಾಳೆ ಚಿತ್ರದುರ್ಗಕ್ಕೆ ಯೋಗಿ ಆದಿತ್ಯನಾಥ್ ಬರುವುದಿಲ್ಲ ಎಂದು ಬಿಜೆಪಿ ಸೋಷಿಯಲ್ ಮೀಡಿಯಾಗಳಲ್ಲಿ ಪ್ರಚಾರ ಮಾಡುತ್ತಿದೆ. ಇದೇ ಮೊದಲ ಬಾರಿಗೆ ಚಿತ್ರದುರ್ಗಕ್ಕೆ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಬರುವ ವಿಚಾರ ತಿಳಿದು ಬಿಜೆಪಿ ಕಾರ್ಯಕರ್ತರು ಸಂಭ್ರಮಿಸಿದ್ದರು. ಆದರೆ, ಈಗ ಕಾರ್ಯಕ್ರಮ ರದ್ದಾಗಿದ್ದು ನಿರಾಸೆ ಮೂಡಿಸಿದೆ. ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಚೇರಿಯಿಂದ ಕಾರ್ಯಕ್ರಮ ರದದಾಗಿರುವ ಬಗ್ಗೆ ಸೋಮವಾರ ರಾತ್ರಿ ಮಾಹಿತಿ ಬಂದಿದೆ. ಕರ್ನಾಟಕದ ಒಟ್ಟು ಪ್ರವಾಸ ರದ್ದು ಮಾಡಲಾಗಿದೆ. ಚಿತ್ರದುರ್ಗ, ಮಡಿಕೇರಿ, ಉಡುಪಿ ಹಾಗೂ ಬೆಂಗಳೂರು ದಕ್ಷಿಣ ಕ್ಷೇತ್ರಕ್ಕೆ ಪ್ರವಾಸ ನಿಗಧಿಯಾಗಿತ್ತು

**ಪ್ರಮುಖ ಸುದ್ದಿ**

### ಹುಬ್ಬಳ್ಳಿ ನೇಹಾಹಿರೇಮಠ ಕಗ್ಗೊಲೆ ಖಂಡಿಸಿ ಬೀದಿಗಿಳಿದ ವೀರಶೈವ ಲಿಂಗಾಯತ ಸಂಘಟನೆಗಳು

# ಆರೋಪಿಗೆ ಮರಣದಂಡನೆ ವಿಧಿಸುವಂತೆ ಗೌರ್ನರ್‌ಗೆ ಮನವಿ

» ಚಳ್ಳಕೆರೆ

ರಾಜ್ಯದ ಪ್ರಮುಖ ವಾಣಿಜ್ಯ ಕೇಂದ್ರ ಹುಬ್ಬಳ್ಳಿ ನಗರದಲ್ಲಿ ಪರೀಕ್ಷೆ ಬರೆಯಲು ಹೋಗಿದ್ದ ಎಂಸಿಎ ವಿದ್ಯಾರ್ಥಿನಿ ನೇಹಾಹಿರೇಮಠವರನ್ನು ಹಾಡುಹಗಲೇ ಬಿವಿಬಿ ಕಾಲೇಜಿನ ಕ್ಯಾಂಪಸ್‌ನಲ್ಲಿ ಚಾಕುವಿನಿಂದ ಇರಿದು ಹತ್ಯೆ ಮಾಡಿದ ಆರೋಪಿ ಫಯಾಜ್‌ಗೆ ಮರಣದಂಡನೆ ಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ತಾಲ್ಲೂಕು ವೀರಶೈವ ಲಿಂಗಾಯತ ಸಂಘಟನೆಗಳ ಒಕ್ಕೂಟ ರಾಜ್ಯಪಾಲರನ್ನು ಆಗ್ರಹಿಸಿವೆ.

ಹುಬ್ಬಳ್ಳಿಯ ನಗರಸಭಾ ಸದಸ್ಯ ನಿರಂಜನ್‌ಹಿರೇಮಠ, ಗೀತ ದಂಪತಿಗಳ ಪುತ್ರಿ ನೇಹಾ ಹಿರೇಮಠ ಹುಬ್ಬಳ್ಳಿ ಬಿವಿಬಿ ಕಾಲೇಜಿನ ಪ್ರಥಮ ವರ್ಷದ ಎಂಸಿಎ ವಿದ್ಯಾರ್ಥಿನಿಯಾಗಿದ್ದು ಪರೀಕ್ಷೆ ಬರೆದು ಹೊರ ಬರುವ ಸಂದರ್ಭದಲ್ಲಿ ಏಕಾಏಕಿ ದಾಳಿ ನಡೆಸಿದ ಭಗ್ನಪ್ರೇಮಿ ಆಕೆ ಸಹಪಾಠಿ ಫಯಾಜ್ ಆಕೆಯ ಮೇಲೆ ದಿಢೀರ್ ಹಲ್ಲೆ ನಡೆಸಿ 14 ಬಾರಿ ಚಾಕುವಿನಿಂದ ಕುತ್ತಿಗೆಯೂ ಸೇರಿದಂತೆ ದೇಹದ ಹಲವಾರು ಭಾಗಕ್ಕೆ ತಿವಿದು ಪರಿಣಾಮವಾಗಿ ರಕ್ತದ ಮಡುವಿನಲ್ಲಿ ಬಿದ್ದ ನೇಹಾಹಿರೇಮಠ ಆಸ್ಪತ್ರೆಗೆ ಸಾಗಿಸುವ ಸಂದರ್ಭದಲ್ಲಿ ಮೃತಪಟ್ಟಿರುತ್ತಾಳೆ.




ನೇಹಾಹಿರೇಮಠರವರ ಕಗ್ಗೊಲೆ ಇಡೀ ಸಮಾಜವೇ ತಲೆತಗ್ಗಿಸುವಂತಾಗಿದೆ. ವಿಶೇಷವಾಗಿ ಕಾಲೇಜಿಗೆ ವಿದ್ಯಾಭ್ಯಾಸಕ್ಕಾಗಿ ಹೋಗುವ ವಿದ್ಯಾರ್ಥಿನಿಯರು ಕಾಲೇಜಿಗೆ ಹೋಗದಂತಹ ಸ್ಥಿತಿ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕು ವೀರಶೈವ ಲಿಂಗಾಯತ ಸಂಘಟನೆಯಿಂದ ಬೃಹತ್ ಮೆರವಣಿಗೆ ನಡೆಸಿ ತಹಶೀಲ್ದಾರ್‌ಗೆ ಮನವಿ ಅರ್ಪಿಸಲಾಯಿತು. ಸಂಘದ ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್ ಮಾತನಾಡಿ, ವಿದ್ಯಾರ್ಥಿನಿಯರ ಆತ್ಮಬಲವನ್ನೇ ಕುಗ್ಗಿಸುವ ಘಟನೆಯಾಗಿದೆ. ಯಾವುದೇ ಪೋಷಕರು ರಾಜ್ಯದ ಯಾವುದೇ ಕಾಲೇಜಿಗೆ ತಮ್ಮ ಹೆಣ್ಣು ಮಕ್ಕಳನ್ನು ವಿದ್ಯಾಭ್ಯಾಸಕ್ಕೆ ಕಳಿಸಲು ಚಿಂತನೆ ನಡೆಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಇಂತಹ ಬೀಬಸ್ಥ ಘಟನೆ ಎಂದೂ ನಡೆದಿರಲಿಲ್ಲ. ಮಾನ್ಯ ರಾಜ್ಯಪಾಲರು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಿಬಿಐ ತನಿಖೆಗೆ ವರ್ಗಾಹಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಬೇಕು. ಅಮಾಯಕವಿದ್ಯಾರ್ಥಿನಿಯರಮಾನಪ್ರಾಣ ರಕ್ಷಿಸಲು ಸರ್ಕಾರ ಮುಂದಾಗಬೇಕೆಂದು ಒತ್ತಾಯಿಸಿದ್ದಾರೆ.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ವೀರಶೈವ ಸಂಘಟನೆಗಳವತಿಯಿಂದ ನೇಹಾಹಿರೇಮಠರವರ ಹತ್ಯೆ ವಿರೋಧಿಸಿ ತಾವು ಘನತೆವೆತ್ತ ರಾಜ್ಯಪಾಲರಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಮುಂದಿನಕ್ರಮಕ್ಕಾಗಿ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ನಗರದ ವೀರಶೈವ ಕಲ್ಯಾಣಮಂಟಪದಿಂದ ಹೊರಟ ಮೆರವಣಿಗೆ ನೆಹರು, ಅಂಬೇಡ್ಕರ್ ವೃತ್ತದ ಮೂಲಕ ತಾಲ್ಲೂಕು ಕಚೇರಿಗೆ ಆಗಮಿಸಿ ಮನವಿ ನೀಡಲಾಯಿತು.

ವೀರಶೈವ ಸಮಾಜದ ಮುಖಂಡರಾದ ಕೆ.ಎಂ.ಜಗದೀಶ್, ಕೆ.ಎಂ.ಕೊಟ್ರೇಶ್, ಶಿವಕುಮಾರ್, ಮಂಜುನಾಥ,ನಗರಸಭಾ ಸದಸ್ಯ ಸಿ.ಎಂ.ವಿಶುಕುಮಾರ್, ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ್, ಎನ್. ರವಿಕುಮಾರ್, ರೇವಣ್ಣ, ಪಿ.ಜಗದೀಶ್, ಜೆಎಂಸಿ ವೀರೇಶ್, ಇಂದುಶೇಖರ್, ಮಾತೃಶ್ರೀಎನ್.ಮಂಜುನಾಥ, ಲೋಕೇಶ್, ಕೆ.ಎಂ.ಯತೀಶ್, ವಾಸುದೇವ, ಮಧುಮತಿ, ಬಿ.ಎಂ.ಭಾಗ್ಯಮ್ಮ, ಮಂಜುಳಾರಾಜ್, ಪದ್ಮನಾಗರಾಜು, ಸುಮಸೋಮಶೇಖರ್, ಜಗದಾಂಭ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸಿಬ್ಬಂದಿಗಳಿಂದ 23 ರಂದು ಮತದಾನ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣಾ ಕರ್ತವ್ಯದಲ್ಲಿರುವ ಮೊದಲ ಹಂತದ ಮತದಾನ ನಡೆಯುವ ಕ್ಷೇತ್ರಗಳ ಮತದಾರರಾಗಿ ದಾವಣಗೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣಾ ಕರ್ತವ್ಯ ನಿರ್ವಹಿಸುತ್ತಿರುವ ಅನ್ಯ ಜಿಲ್ಲೆ ಮತದಾರರು ಏ. 23 ರಂದು ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ದಾವಣಗೆರೆ ಸ್ಮಾರ್ಟ್ ಸಿಟಿ ಕೊಠಡಿ ಸಂಖ್ಯೆ 5 ರಲ್ಲಿ ಸ್ಥಾಪಿಸಲಾಗಿರುವ ಅಂಚೆ ಮತದಾನ ಸೌಲಭ್ಯ ಕೇಂದ್ರದಲ್ಲಿ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ. ರಾಜ್ಯದ 14 ಕ್ಷೇತ್ರಗಳಲ್ಲಿ ಎರಡನೇ ಹಂತ ಅಂದರೆ ರಾಜ್ಯದಲ್ಲಿ ಮೊದಲ ಹಂತದಲ್ಲಿ ಮತದಾನ ನಡೆಯುವ ಕ್ಷೇತ್ರಗಳ ಮತದಾರರಾಗಿದ್ದು ದಾವಣಗೆರೆ ಜಿಲ್ಲೆಯಲ್ಲಿ ಚುನಾವಣಾ ಕರ್ತವ್ಯದಲ್ಲಿ ನಿರತರಾಗಿದ್ದಾರೆ. ಇದರಲ್ಲಿ 58 ಮತದಾರರು ಪೊಲೀಸ್ ಮತ್ತು 5 ಇತರೆ ಇಲಾಖೆಯಲ್ಲಿ ಚುನಾವಣಾ ಕರ್ತವ್ಯ ನಿರ್ವಹಿಸುತ್ತಿದ್ದು ಇವರು ಮತದಾನ ಮಾಡುವರು. ಈ ಮತದಾರರು ಚುನಾವಣಾ ಆಯೋಗದ ಗುರುತಿನ ಚೀಟಿ ಅಥವಾ ಇಲಾಖೆ ಗುರುತಿನ ಚೀಟಿ, ಡ್ರೈವಿಂಗ್ ಲೈಸೆನ್ಸ್, ಪಾನ್ ಕಾರ್ಡ್ ಸೇರಿದಂತೆ ವಿವಿಧ 19 ದಾಖಲೆಗಳಲ್ಲೊಂದನ್ನು ಹಾಜರುಪಡಿಸಿ ಅಂಚೆ ಮತದಾನ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

### ಗಾಳಿಪಟದಂತೆ ಸ್ವತಂತ್ರವಾಗಿ ಮತದಾನ ಮಾಡಲು ಕರೆ



» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ, ಇವರ ಸಹಾಯದೊಂದಿಗೆ ಹೈಸ್ಕೂಲ್ ಮೈದಾನದಲ್ಲಿ ಗಾಳಿಪಟ ಹಾರಿಸುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು . ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ಮಾತನಾಡಿ ವಿಭಿನ್ನ ರೀತಿಯಲ್ಲಿ ಉನ್ನತ ಮಟ್ಟದಲ್ಲಿ ಗಾಳಿಪಟ ಹಾರಿಸುವ ಮೂಲಕ ಮತದಾನ ಜಾಗೃತಿ ಸಂದೇಶ ನೀಡಲಾಗಿದೆ. ಗಾಳಿಪಟವು ಹೇಗೆ ಸ್ವತಂತ್ರವಾಗಿ ಹಾರಾಡುತ್ತದೆ, ಅದೇ ರೀತಿ ನೀವು ಸಹ ಸ್ವತಂತ್ರವಾಗಿ, ನ್ಯಾಯ ಸಮ್ಮತವಾಗಿ, ಯಾವುದೇ ಆಮಿಷಗಳಿಗೆ ಒಳಗಾಗದೆ ಮೇ 7 ರಂದು ತಮ್ಮ ಅಮೂಲ್ಯ ಮತ ಚಲಾಯಿಸಬೇಕೆಂದು ತಿಳಿಸಿದರು. ಗಾಳಿಪಟದಲ್ಲಿ ಮತದಾರರ ಸಂದೇಹ, ಮಾಹಿತಿಗೆ 1950 ಬಳಸಿ, ಯಾವುದೇ ಮತದಾರರು ಮತದಾನದಿಂದ ಹೊರಗುಳಿಯಬಾರದು. ಮೇ 7 ರಂದು ನಮ್ಮ ನಡೆ, ಮತಗಟ್ಟೆ ಕಡೆ ಎಂಬಿತ್ಯಾದಿ ಘೋಷವಾಕ್ಯಗಳು ಗಾಳಿಪಟದಲ್ಲಿ ರಾರಾಜಿಸುತ್ತಿದ್ದವು. ಕಾರ್ಯಕ್ರಮದಲ್ಲಿ ಚುನಾವಣಾ ಐಕಾನ್ ಚಿತ್ರನಟ ಪೃಥ್ವಿ ಶಾಮನೂರ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಪಶು ಸಂಗೋಪನಾ ಇಲಾಖೆ ಉಪ ನಿರ್ದೇಶಕರು ಡಾ; ಚಂದ್ರಶೇಖರ್ ಸುಂಕದ್, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಗಾಯಿತ್ರಿ ಕೆ.ಎಚ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬೇಬಿ ಸುನೀತ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

### ಮತದಾರರ ಜಾಗೃತಿ ಅಂಗವಾಗಿ ಸೈಕಲ್ ಜಾಥಾ

» ದಾವಣಗೆರೆ

ಲೋಕಸಭಾ ಚುನಾವಣೆ ಮತದಾರರ ಜಾಗೃತಿ ಅಂಗವಾಗಿ ಸ್ಮಾರ್ಟ್ ಸಿಟಿಯಿಂದ ಏಪ್ರಿಲ್ 24 ರಂದು ಬೆಳಗ್ಗೆ 7 ಗಂಟೆಗೆ ತರಳಬಾಳು ಅನುಭವ ಮಂಟಪದಶಾಲೆಯಿಂದಜಿಲ್ಲಾಕ್ರೀಡಾಂಗಣದವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದ್ದಾರೆ.

### ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ

» ದಾವಣಗೆರೆ

ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕರ್ನಾಟಕ ಲೋಕಸೇವಾ ಆಯೋಗ ನಡೆಸಲಿರುವ ಕೆಎಎಸ್ ಮತ್ತು ಇತರ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕರಾಮುವಿ ಕೇಂದ್ರ ಕಚೇರಿಯಲ್ಲಿ ನಡೆಸಲಾಗುವುದು. ಆಸಕ್ತರು ಏಪ್ರಿಲ್ 30 ರೊಳಗಾಗಿ ಹೆಸರು ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ 0821-2515944 ದೂರವಾಣಿಗೆ ಸಂಪರ್ಕಿಸಲು ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ ತಿಳಿಸಿದ್ದಾರೆ.

ವಿಶ್ವಭೂಮಿ ದಿನಾಚರಣೆಯಲ್ಲಿ ಜಿಲ್ಲಾ ಪ್ರಧಾನ ನ್ಯಾಯಾಧೀಶೆ ಕೆ.ಬಿ.ಗೀತಾ ಕರೆ

# ಪ್ಲಾಸ್ಟಿಕ್ ಬಳಕೆಗೆ ಬ್ರೇಕ್ ಹಾಕಿ ಭೂಮಿ ರಕ್ಷಿಸಿ

» ಚಿತ್ರದುರ್ಗ

ನಿತ್ಯದ ಜೀವನದಲ್ಲಿ ಅನಗತ್ಯವಾಗಿ ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿದೆ. ಇದರಿಂದ ಅಪಾರವಾದ ಪರಿಸರ ನಾಶದ ಜೊತೆಗೆ ಮನುಷ್ಯರ ಆರೋಗ್ಯದ ಮೇಲೂ ಮಾರಕ ಪರಿಣಾಮಗಳು ಉಂಟಾಗುತ್ತಿವೆ. ಸಮುದ್ರ ಸಾಗರಗಳಲ್ಲಿ ಅಪರೂಪದ ಜೀವರಾಶಿಗಳು ಅಳಿವಿನ ಅಂಚಿಗೆ ತಲುಪಿವೆ. ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಿ ಭೂಮಿ ರಕ್ಷಣೆಗೆ ಪಣತೊಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಕರೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಅರಣ್ಯ ಇಲಾಖೆ, ಸರ್ಕಾರಿ ಕಲಾ ಕಾಲೇಜು ಸಂಯುಕ್ತಾಶ್ರಯದಲ್ಲಿ ನಗರದ ಆಡುಮಲ್ಲೇಶ್ವರ ಮೃಗಾಲಯದಲ್ಲಿ ಆಯೋಜಿಸಲಾದ ಭೂಮಿ ದಿನಾಚರಣೆ ಅಂಗವಾಗಿ ಕಿರು ಮೃಗಾಲಯದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಬಾರಿಯ ಭೂಮಿ ದಿನಾಚರಣೆಯ ಧ್ಯೇಯವಾಕ್ಯ ಪ್ಲಾನೆಟ್ ವರ್ಸಸ್ ಪ್ಲಾಸ್ಟಿಕ್ ಎಂಬುದಾಗಿದೆ. 2040ರ ವೇಳೆಗೆ ಜಾಗತಿಕವಾಗಿ ಶೇ.60 ರಷ್ಟು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುವ ಉದ್ದೇಶ ಹೊಂದಲಾಗಿದೆ. ಕ್ರಮೇಣವಾಗಿ ಸಂಪೂರ್ಣ ಪ್ಲಾಸ್ಟಿಕ್ ಪ್ರಪಂಚದಿಂದಲೇ ನಿರ್ಮೂಲನೆ ಮಾಡಬೇಕಿದೆ. ಪ್ರತಿನಿತ್ಯದ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆ ಹಾಸುಹೊಕ್ಕಾಗಿದೆ. ನಜಜಾತ ಶಿಶುಗಳ ಯಕೃತ್ತಗಳಲ್ಲಿ ಮೈಕ್ರೋಪ್ಲಾಸ್ಟಿಕ್ ಅಂಶಗಳು ಕಂಡುಬಂದು, ಚಿಕ್ಕಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ ಎಂದು ಪ್ರಧಾನ ನ್ಯಾಯಾಧೀಶೆ ಕೆ.ಬಿ.ಗೀತಾ ಕಳವಳ ವ್ಯಕ್ತ ಪಡಿಸಿದರು.



ಮೋಜು ಮಸ್ತಿಮಾಡಿ ಬಿಸಾಡುವ ಪ್ಲಾಸ್ಟಿಕ್‌ಗಳು ಜಲಮೂಲಗಳಿಗೆ ಸೇರಿ ಜಲಚರಗಳಿಗೆ ಕಂಟಕವಾಗಿ ಪರಿಣಮಿಸುತ್ತಿವೆ. ಸಮುದ್ರಗಳಲ್ಲಿ ಶೇ.20ಕ್ಕಿಂತಲೂ ಅಧಿಕ ಜೀವರಾಶಿಗಳು ಅಳಿವಿನಂಚಿಗೆ ಬಂದಿವೆ.

ಮಾನವರಾದ ನಾವು ಅತಿಯಾದ ಪ್ಲಾಸ್ಟಿಕ್ ಬಳಕೆ ಮಾಡಿ ಭೂಮಂಡಲವನ್ನು ನಾಶದ ತುದಿ ತಂದು ನಿಲ್ಲಿಸಿದ್ದೇವೆ. ಈ ವಿನಾಶವನ್ನು ತಪ್ಪಿಸಬೇಕಾದರೆ ಇಂದಿನಿಂದಲೇ ಪ್ರತಿಯೊಬ್ಬರು ಪ್ಲಾಸ್ಟಿಕ್ ಬಳಕೆಗೆ ಮಿತಿ ಹಾಕಿಕೊಳ್ಳಬೇಕು ಎಂದರು.

ಭೂಮಿಯನ್ನು ತಾಯಿ ಎಂದು ಭಾವಿಸುವ ಸಂಸ್ಕೃತಿ ನಮ್ಮಲ್ಲಿದೆ. ಭೂಮಿ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ. ಭೂಮಿ ನಮಗೆ ಆಶ್ರಯ, ಆಹಾರ, ಫಲಪುಷ್ಪ, ಆರೋಗ್ಯಕ್ಕಾಗಿ ಸಂಜೀವಿನಿಗಳನ್ನು ನೀಡಿದೆ. ನಮ್ಮ ದುರಾಸೆಯ ಪರಿಣಾಮವಾಗಿ ಇಂದು ಭೂಮಿಯನ್ನು ಹಾಳು ಮಾಡುತ್ತಿದ್ದೇವೆ. 1970 ರಲ್ಲಿ ಮೊದಲ ಬಾರಿಗೆ ಅಂದಿನ ಅಮೇರಿಕಾದ ಸೆನೆಟರ್ ಗೆಲಾರ್ಡ್ ನೆಲ್ಸನ್ ಹಾಗೂ ಹಾರ್ವರ್ಡ್ ವಿ.ವಿ. ವಿದ್ಯಾರ್ಥಿ ಡೆನಿಸ್ ಹೆಯಿಸ್ ಕೈಗಾರಿಕರಣದಿಂದ ಉಂಟಾಗುತ್ತಿರುವ ಪರಿಸರ ನಾಶದ ಬಗ್ಗೆ ಅರಿವು ಮೂಡಿಸಲು ಏಪ್ರಿಲ್ 22 ರಂದು ಭೂಮಿ ದಿನಾಚರಣೆಯನ್ನು ಪ್ರಾರಂಭಿಸಿದರು. ಅಂದಿನಿಂದ ಈವರೆಗೂ ಪ್ರತಿ ವರ್ಷ ಏಪ್ರಿಲ್ 22 ರಂದು ವಿಭಿನ್ನ ಧ್ಯೇಯ ವಾಕ್ಯಗಳೊಂದಿಗೆ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದು ಪ್ರಧಾನ ನ್ಯಾಯಧೀಶೆ ಕೆ.ಬಿ.ಗೀತಾ ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಪ್ಲಾಸ್ಟಿಕ್ ಮಾಲಿನ್ಯ ಪರಿಸರಕ್ಕೆ ಮಾತ್ರವಲ್ಲ. ನಮ್ಮ ಮತ್ತು ಭವಿಷ್ಯದ ಪೀಳಿಗೆಯ ಆರೋಗ್ಯಕ್ಕೂ ಅಪಾಯವನ್ನುಂಟುಮಾಡುತ್ತದೆ. ಹಾಗಾಗಿ ಪ್ರತಿಯೊಬ್ಬರು ಸಹ ಪರಿಸರ ಸಂರಕ್ಷಣೆಯ ಅರಿವು ಹಾಗೂ ಪ್ರಜ್ಞೆ ಹೊಂದಿರುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಚಿತ್ರದುರ್ಗ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಮಾತನಾಡಿ, ಪ್ಲಾಸ್ಟಿಕ್ ಜೀವನದ ಅವಿಭಾಜ್ಯ ಅಂಗವಾಗಿದೆ. ಅತೀ ಹೆಚ್ಚಿನ ಪ್ಲಾಸ್ಟಿಕ್ ಬಳಕೆಯಿಂದ ದೇಹದ ರಕ್ತದಲ್ಲಿಯೂ ಮೈಕ್ರೋ ಪ್ಲಾಸ್ಟಿಕ್ ಸೇರಿಕೊಂಡಿದೆ. ಹಾಗಾಗಿ ನಮ್ಮ ಮನೆಯಿಂದಲೇ ಪರಿಸರ ಸಂರಕ್ಷಣೆಯ ಕಾಳಜಿ ಪ್ರಾರಂಭಬೇಕಿದೆ ಎಂದರು.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಕೆಂಪರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜೆಎಂಎಫ್‌ಸಿ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಚೈತ್ರಾ, ಉಜ್ವಲ ವೀರಣ್ಣ ಸಿದ್ದಣ್ಣವರ್, ನೇಮಚಂದ್ರ, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಅನಿತಾ ಕುಮಾರಿ, 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಸಹನ.ಆರ್ ಹಾಗೂ ಜೆಎಂಎಫ್‌ಸಿ ಪ್ರಧಾನ ಸಿವಿಲ್ ನ್ಯಾಯಾಧೀಶೆ ಗೀತಾ ಕುಂಬಾರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಅರಣ್ಯ ಉಪಸಂರಕ್ಷಣಾಧಿಕಾರಿ ಚಂದ್ರಣ್ಣ,ವಲಯ ಅರಣ್ಯಾಧಿಕಾರಿ ಹೆಚ್.ಉಷಾರಾಣಿ, ಆಡುಮಲ್ಲೇಶ್ವರ ಕಿರು ಮೃಗಾಲಯ ವಲಯಅರಣ್ಯಾಧಿಕಾರಿ ಎನ್.ವಾಸುದೇವ, ಸಹಾಯಕ ಪ್ರಾಧ್ಯಾಪಕ ಹಾಗೂ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಡಾ.ವಿ.ಪ್ರಸಾದ್ ಸೇರಿದಂತೆ ಮತ್ತಿರರು ಇದ್ದರು.

# ದಾವಣಗೆರೆ: ಗುರುಭವನ ರಸ್ತೆಯಲ್ಲಿ ರಂಗೋಲಿ ಚಿತ್ತಾರ



» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಇವರುಗಳ ಸಹಾಯದೊಂದಿಗೆ ಸೋಮವಾರ ನಗರದ ಗುರುಭವನದ ರಸ್ತೆಯಲ್ಲಿ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಮಾತನಾಡಿ ಜಿಲ್ಲೆಯಾದ್ಯಂತ ಗ್ರಾಮೀಣ ಭಾಗದ ಹಳ್ಳಿಗಳಿಂದ ಬಂದಿರುವ ಅಂಗನವಾಡಿ ಸಹಾಯಕರು ಮತ್ತು ಕಾರ್ಯಕರ್ತರು ಬಗೆ ಬಗೆಯ ರಂಗೋಲಿಯ ಚಿತ್ರಗಳನ್ನು ಬಿಡುಸುವ ಮೂಲಕ ಮತದಾನ ಜಾಗೃತಿ ಮೂಡಿಸಿರುವುದು ಹೆಮ್ಮೆಯ ವಿಷಯವಾಗಿದೆ. ಮತದಾರರು ಸಹ ಹೆಮ್ಮೆಯಿಂದ ತಮ್ಮ ಮತ ಚಲಾಯಿಸುವಂತಾಗಬೇಕೆಂದರು.

ರಂಗೋಲಿ ಮೂಲಕ ನಾಲ್ಕು ತಲೆಮಾರಿನ ಒಂದೇ ಕುಟುಂಬದ ಮತದಾರರು, ಮತದಾನ ಮೂಲಭೂತ ಕರ್ತವ್ಯ, ನಮ್ಮ ದೇಶ ಸೇವಕರಿಗೆ ನಾವು ನೀಡುವ ಅಮೂಲ್ಯವಾದ ದಾನವೇ ಮತದಾನ, ಮತದಾನ ಮಾಡಿದರೇ ಮಾತ್ರ, ಆ ಹಕ್ಕಿಗೆ ಅರ್ಥ ಸಿಗುತ್ತದೆ. ಮೇ 7 ರಂದು ತಪ್ಪದೇ ಮತ ಚಲಾಯಿಸಿ ಎಂಬಿತ್ಯಾದಿ ಘೋಷವಾಕ್ಯಗಳೊಂದಿಗೆ ರಂಗೋಲಿ ಬಿಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಹಿಳಾ ಮಕ್ಕಳ ಅಭಿವೃದ್ಧಿ ಅಧಿಕಾರಿ ಅಶೋಕ್ ಕಾಂಬ್ಳೆ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಿಯದರ್ಶಿನಿ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ನೇತ್ರಾವತಿ .ಜಿ, ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕಿಯರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಬಿಜೆಪಿ ಅಭ್ಯರ್ಥಿ ಬೆಂಬಲಿಸಲು ಮತದಾರರಿಗೆ ಸುರೇಶ್ ಕರೆ



» ಹೊಳಲ್ಕೆರೆ

ಬಿಜೆಪಿ ಪಕ್ಷವನ್ನ ಕೇಂದ್ರದಲ್ಲಿ ಅಧಿಕಾರಕ್ಕೆ ತರಲು ಬಿಜೆಪಿ ಪಕ್ಷದ ಅಭ್ಯರ್ಥಿ ಗೋವಿಂದ ಕಾರಜೋಳಗೆ ಮತ ನೀಡಬೇಕೆಂದು ಮಾಜಿ ಜಿಲ್ಲಾಧ್ಯಕ್ಷ ಜಿ.ಎಂ ಸುರೇಶ್ ತಿಳಿಸಿದರು.

ತಾಲ್ಲೂಕಿನ ರಾಮಗಿರಿ. ಬಿದುರ್ಗ, ಸೇರಿ ವಿವಿಧ ಹಳ್ಳಿಗಳಲ್ಲಿ ಬಿಜೆಪಿ ಪಕ್ಷದ ಪರ ಮನೆಗಳಿಗೆ ತೆರಳಿ ಪ್ರಚಾರ ನಡೆಸಿ ಮಾತನಾಡಿದರು. ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ 30 ವರ್ಷಗಳಿಂದ ಬಿಜೆಪಿ ಪಕ್ಷವನ್ನ ಕಟ್ಟಿ ಬೆಳೆಸಲು ಹೋರಾಟ ಕೈಗೊಂಡಿದ್ದೇವೆ. ಅದರ ಪರಿಣಾಮವಾಗಿ ಬಿಜೆಪಿ ಪಕ್ಷ ಕ್ಷೇತ್ರದಲ್ಲಿ ಸುಭದ್ರವಾಗಿದೆ. ಜನರು ಈ ಬಾರಿ ಬಿಜೆಪಿ ಪಕ್ಷಕ್ಕೆ ಬೆಂಬಲಿಸಲು ತುದಿಗಳಾದಲ್ಲಿ ನಿಂತಿದ್ದು ಬಾರಿ ಬಹುಮತ ಸಿಗುವ ವಿಶ್ವಾಸ ವ್ಯಕ್ತ ಪಡಿಸಿದರು. ಎಸ್. ಆರ್.ಗಿರೀಶ್ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ದೇಶದ ಭದ್ರತೆ ಹೆಚ್ಚಾಗಲಿದೆ. ದೇಶದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ನಿಯಂತ್ರಣ,. ರಸ್ತೆ ಅಭಿವೃದ್ಧಿ,. ಶೈಕ್ಷಣಿಕ ಕ್ಷೇತ್ರ ಬದಲಾವಣೆ, ನೀರಾವರಿಯ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತದೆ. ಈ ನಿಟ್ಟಿನಲ್ಲಿ ಕೇಂದ್ರದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಬೇಕು. ಹಾಗಾಗಿ ಚಿತ್ರದುರ್ಗದ ಸಂಸತ್ ಕ್ಷೇತ್ರವನ್ನು ಗೆಲ್ಲಬೇಕಾದರೆ ಬಿಜೆಪಿ ಪಕ್ಷದ ಅಭ್ಯರ್ಥಿ ಗೋವಿಂದಕಾರಜೋಳ್ ಗೆ ಮತ ನೀಡಬೇಕೆಂದರು.

## ಪ್ರಮುಖ ಸುದ್ದಿ

# ನೀಲಕಂಠೇಶ್ವರ ದೇವಾಲಯದಲ್ಲಿ ಗುಗ್ಗುಳ ವೈಭವ

» ಚಿತ್ರದುರ್ಗ

ನಗರದ ನೀಲಕಂಠೇಶ್ವರ ದೇವಾಲಯದ ಆವರಣದಲ್ಲಿನ ವೀರಶೈವ ಸಮಾಜದವತಿಯಿಂದ ಹರಪನಹಳ್ಳಿಯ ಪಟ್ಟಣದ ಮೇಗಳಪೇಟೆ ಶ್ರೀ ಗುಗ್ಗಳ ವೀರಭದ್ರೇಶ್ವರ ದೇವಸ್ಥಾನ ಸಮಿತಿವತಿಯಿಂದ ಜನಪದ ಕಲಾ ತಂಡದೊಂದಿಗೆ ಶ್ರೀ ವೀರಭದ್ರ ದೇವರ ಗುಗ್ಗುಳ ಮತ್ತು ಅಗ್ನಿಕುಂಡ ಕಾರ್ಯಕ್ರಮ ನಡೆಸಲಾಯಿತು.

ಬೆಳಿಗ್ಗೆ 7 ಗಂಟೆಗೆ ನಗರದ ರಂಗಯ್ಯನ ಬಾಗಿಲ ಬಳಿಯ ಉಜ್ಜಯನಿ ಮಠದ ಆವರಣದಲ್ಲಿ ಗಂಗಾಪೂಜೆಯ ನಂತರ ಜನಪದ ಕಲಾ ತಂಡದೊಂದಿಗೆ ಗುಗ್ಗುಳ ಪ್ರಾರಂಭವಾಗಿದ್ದು, ರಂಗಯ್ಯನ ಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಆನೆಬಾಗಿಲು, ಮಹಾತ್ಮಗಾಂಧಿ ವೃತ್ತ ಮುಖಾಂತರವಾಗಿ ಗುಗ್ಗಳ ಹಾದು ಹೋಯಿತು. ಈ ಸಂದರ್ಭದಲ್ಲಿ ಭಕ್ತಾಧಿಗಳು ಸಾಲಾಗಿ ನೆಲದ ಮೇಲೆ ಕುಳಿತುಕೊಂಡು ಅವರ ತಲೆಯ ಮೇಲೆ ವೀರಭದ್ರಸ್ವಾಮಿಯ ಅಗ್ನಿಕುಂಡವನ್ನು ಇಡುವುದರ ಮೂಲಕ ಸ್ವಾಮಿಯ ಆರ್ಶಿವಾದವನ್ನು ಪಡೆದರು.

ದಾರಿಯುದ್ದಕ್ಕೂ ಹರಪನಹಳ್ಳಿಯ ಪಟ್ಟಣದ ಮೇಗಳಪೇಟೆ ಶ್ರೀ ಗುಗ್ಗಳ ವೀರಭದ್ರೇಶ್ವರ ದೇವಸ್ಥಾನ ಸಮಿತಿವತಿಯಿಂದ ಜನಪದ ಕಲಾ ತಂಡದವರು ವೀರಭದ್ರನ ವೇಷವನ್ನು ಧರಿಸುವುದರ ಮೂಲಕ ವೀರಭದ್ರ ಸ್ವಾಮಿಯ ಅವತಾರಗಳನ್ನು ಒಡಪುಗಳನ್ನು ಹೇಳುವುದರ ಮೂಲಕ ಭಕ್ತಾಧಿಗಳಿಗೆ ವೀರಭದ್ರಸ್ವಾಮಿಯ ಆವತಾರಗಳನ್ನು ತಿಳಿಸಿದರು. ಇವರೊಂದಿಗೆ ವೀರಗಾಸೆಯ ತಂಡದವರು ಹಿಮ್ಮೇಳವನ್ನು ನುಡಿಸುವುದರ ಮೂಲಕ ಅವರಿಗೆ ಸಾಥ್ ನೀಡಿದರು.





ದಾರಿಯುದ್ದಕ್ಕೂ ವೀರಭದ್ರಸ್ವಾಮಿಯ ಭಕ್ತಾಧಿಗಳು ಮನೆಯ ಮುಂದೆ ನೀರನ್ನು ಹಾಗೂ ರಂಗೋಲೆಯನ್ನು ಹಾಕುವುದರ ಮೂಲಕ ಸ್ವಾಮಿಯ ಗುಗ್ಗುಳವನ್ನು ಬರ ಮಾಡಿಕೊಂಡರು. ಇದ್ದಲ್ಲದೆ ಹಲವಾರು ಭಕ್ತಾಧಿಗಳು ತಮ್ಮ ಶಕ್ತಾನುಸಾರ ಗುಗ್ಗಳದಲ್ಲಿ ಭಾಗವಹಿಸಿದ್ದವರಿಗೆ ಮಜ್ಜಿಗೆ, ಪಾನಕವನ್ನು ನೀಡಿದರು. ಇದರೊಂದಿಗೆ ಭಕ್ತಾಧಿಗಳು ತಮ್ಮ ಮನೆಯ ಮುಂದೆ ವೀರಭದ್ರಸ್ವಾಮಿಯ ಗುಗ್ಗಳ ಬಂದಾಗ ಹಣ್ಣು, ಕಾಯಿ ಹೂ. ಗಳನ್ನು ನೀಡುವುದರ ಮೂಲಕ ಸ್ವಾಮಿಗೆ ಭಕ್ತಿಯನ್ನು ಸರ್ಮಪಿಸಿದರು.

ಮೆರವಣಿಗೆಯ ನಂತರ ನಗರದ ಶ್ರೀ ನೀಲಕಂಠೇಶ್ವರ ದೇವಾಲಯದ ಮುಂಭಾಗದಲ್ಲಿ ನಿರ್ಮಾಣ ಮಾಡಿರುವ ಅಗ್ನಿಕುಂಡಕ್ಕೆ ಪೂಜೆಯನ್ನು ಸಲ್ಲಿಸಿ ತದ ನಂತರ ಅದನ್ನು ಹಾಯುವುದರ ಮೂಲಕ ವೀರಭದ್ರಸ್ವಾಮಿಯ ಗುಗ್ಗಳ ಮತ್ತು ಅಗ್ನಿಕುಂಡ ಕಾರ್ಯಕ್ರಮಕ್ಕೆ ಸಮಾಪ್ತಿ ಹಾಡಲಾಯಿತು. ತದ ನಂತರ ಮಹಾ ಮಂಗಳಾರತಿ ದಾಸೋಹದ ವ್ಯವಸ್ಥೆಯನ್ನು ಮಾಡಲಾಗಿತ್ತು. ಈ ಈ ಗುಗ್ಗಳ ಕಾರ್ಯಕ್ರಮದಲ್ಲಿ ಶ್ರೀ ವೀರಭದ್ರಸ್ವಾಮಿ ಮನೆ ದೇವರ ಮನೆತನದವರು ಹಾಗೂ ಭಕ್ತಾಧಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಇಂದು ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆವಿ ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರುಡುವ ಎಫ್18. ದುರ್ಗಾಂಬಿಕಾ ಫೀಡರ್ ವ್ಯಾಪ್ತಿಯಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಆದ್ದರಿಂದ ಏಪ್ರಿಲ್ 24 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಂ.ಬಿ.ಕೇರಿ, ಹೊಂಡದ ಸರ್ಕಲ್ ಸುತ್ತಮುತ್ತ, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇಡಬ್ಲ್ಯೂಎಸ್ ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ, ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಕಾಡುಗೊಲ್ಲ ಸಮುದಾಯವನ್ನು ಎಸ್ಟಿಗೆ ಸೇರಿಸುವಂತೆ ನಾವು ಒತ್ತಾಯಿಸಿದ್ದರೂ ಏಕೆ ಸ್ಪಂದಿಸುತ್ತಿಲ್ಲ ಮೋದಿಯವರೇ

» ಮೊದಲ ಪುಟದಿಂದ

ಕಾಡುಗೊಲ್ಲ ಸಮುದಾಯವನ್ನು ಎಸ್ಟಿಗೆ ಸೇರಿಸುವಂತೆ ನಾವು ಒತ್ತಾಯಿಸಿದ್ದರೂ ಏಕೆ ಸ್ಪಂದಿಸುತ್ತಿಲ್ಲ ಮೋದಿಯವರೇ
ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರುತ್ತೇವೆ. ಕಾಡುಗೊಲ್ಲ ಸಮುದಾಯವನ್ನು ಖಖಿ ಗೆ ಸೇರಿಸುತ್ತೇವೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಈ ಆಗ್ರಹಕ್ಕೆ ಧ್ವನಿಗೂಡಿಸಿ ಸಹಮತ ವ್ಯಕ್ತಪಡಿಸಿದ ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿಯವರು, ತಮ್ಮ ಭಾಷಣದಲ್ಲೂ ಇದೇ ಮಾತನ್ನು ಪುನರುಚ್ಚರಿಸಿದರು. ಕೇಂದ್ರದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತಿದ್ದಂತೆ ಕಾಡುಗೊಲ್ಲ ಸಮುದಾಯವನ್ನು ಖಖಿ ಗೆ ಸೇರಿಸುತ್ತೇವೆ ಎಂದು ಭರವಸೆ ನೀಡಿದರು. ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೇವಾಲ, ಬಿ.ಕೆ.ಹರಿಪ್ರಸಾದ್, ವಿಧಾನ ಪರಿಷತ್ ಸದಸ್ಯ ಸಲಿಂ ಅಹಮ್ಮದ್, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಶಾಸಕರಾದ ಟಿ.ರಘುಮೂರ್ತಿ, ಟಿ.ಬಿ.ಜಯಚಂದ್ರ, ಬಿ.ಜಿ.ಗೋವಿಂದಪ್ಪ, ಎನ್.ವೈ.ಗೋಪಾಲಕೃಷ್ಣ, ಕೆ.ಸಿ.ವೀರೇಂದ್ರ , ವೆಂಕಟೇಶ್, ಬಸವಂತಪ್ಪ, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಶಾಸಕ ಪೂರ್ಣಿಮಾ ಶ್ರೀನಿವಾಸ್, ವಿಧಾನ ಪರಿಷತ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್,ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಪಿ.ರಘು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್, ಕಾರ್ಯಧ್ಯಕ್ಷ ಹಾಲೇಶ್ ಇದ್ದರು.

### ಏ.25ರಂದು ಮಸ್ಟರಿಂಗ್, 26ರಂದು ಡಿ-ಮಸ್ಟರಿಂಗ್ ಮತಗಟ್ಟೆ ಸಿಬ್ಬಂದಿಗೆ ಚುನಾವಣೆ ಕಾರ್ಯಕ್ಕೆ ವಾಹನ ವ್ಯವಸ್ಥೆ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಇದೇ ಏಪ್ರಿಲ್ 26ರಂದು ಮತದಾನ ನಡೆಯಲಿದ್ದು, ಈ ಸಂಬಂಧ ಏ.25ರಂದು ಮಸ್ಟರಿಂಗ್ ಕಾರ್ಯವಿರುವುದರಿಂದ ವಿವಿಧ ತಾಲ್ಲೂಕುಗಳಿಗೆ ಮತಗಟ್ಟೆ ಸಿಬ್ಬಂದಿ ತೆರಳಲು ಹಾಗೂ ಏ.26ರಂದು ಮತದಾನ ಮುಗಿದ ನಂತರ ತಾಲ್ಲೂಕಿನ ಡಿ-ಮಸ್ಟರಿಂಗ್ ಕೇಂದ್ರದಿಂದ ವಿವಿಧ ತಾಲ್ಲೂಕುಗಳಿಗೆ ಮತಗಟ್ಟೆ ಸಿಬ್ಬಂದಿಯು ತೆರಳಲು ಕೆಎಸ್‌ಆರ್‌ಟಿಸಿ ವಾಹನಗಳ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಚುನಾವಣೆ ಕಾರ್ಯಗಳಿಗೆ ಒಟ್ಟು 299 ವಾಹನಗಳನ್ನು ನಿಯೋಜಿಸಲಾಗಿದೆ. ಪ್ರತಿ ವಾಹನಗಳು ತೆರಳುವ ಮಾರ್ಗದ ಬಗ್ಗೆ ನಾಮಫಲಕಗಳನ್ನು ಹಾಕಬೇಕು. ಈ ಕಾರ್ಯದಲ್ಲಿ ಯಾವುದೇ ರೀತಿ ವ್ಯತ್ಯಾಸವಾಗದಂತೆ ಉಸ್ತುವಾರಿ ನೋಡಿಕೊಳ್ಳಬೇಕು. ತಾಲ್ಲೂಕು ಕಚೇರಿಯ ವಆಹನ ನಿರ್ವಹಣೆಗೆ ನೌಕರರನ್ನು ನಿಯೋಜಿಸಲಾಗಿದೆ.
ವಾಹನ ಕಾರ್ಯಕ್ಕೆ ಸಂಪರ್ಕಿಸಬೇಕಾದ ತಾಲ್ಲೂಕು ಕಚೇರಿಯ ನೌಕರರ ವಿವರ ಇಂತಿದೆ. ಮೊಳಕಾಲ್ಮುರು ತಾಲ್ಲೂಕು ವಾಹನ ನಿರ್ವಹಣೆ ಶಾಖೆಯ ಮೇಲ್ವಿಚಾರಣೆಗಾಗಿ ನೌಕರರಾದ ಕೆಂಚಲಿಂಗಪ್ಪ-9880691998, ಶಿವರಾಜ್-9108836293 ಗೆ ಸಂಪರ್ಕಿಸಬಹುದು. ಚಳ್ಳಕೆರೆ ತಾಲ್ಲೂಕಿಗೆ ಸಂಬಂಧಪಟ್ಟಂತೆ ಶ್ರೀನಿವಾಸ್-9448566953, ಪ್ರಸನ್ನ-9844401294 ಗೆ ಸಂಪರ್ಕಿಸಬಹುದು. ಚಿತ್ರದುರ್ಗ ತಾಲ್ಲೂಕಿಗೆ ಸಂಬಂಧಪಟ್ಟಂತೆ ಎಸ್.ಕೆ.ಮಂಜುನಾಥ್-9844412448, ಹಿರಿಯೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ಮಾರುತಿ-6360157344, ಹೊಸದುರ್ಗ ತಾಲ್ಲೂಕಿಗೆ ಸಂಬಂಧಪಟ್ಟಂತೆ ಕರಿಯಪ್ಪ-9900894779 ಹಾಗೂ ಹೊಳಲ್ಕೆರೆ ತಾಲ್ಲೂಕಿಗೆ ಸಂಬಂಧಪಟ್ಟಂತೆ ಆನಂದ-9632414253 ಗೆ ಸಂಪರ್ಕಿಸಬಹುದು. ತಾಲ್ಲೂಕು ಕಚೇರಿಯ ಸಿಬ್ಬಂದಿಯೊಂದಿಗೆ ವಿಭಾಗೀಯ ಸಂಚಲನಾಧಿಕಾರಿಗಳು, ವಿಭಾಗೀಯ ಕಚೇರಿ, ಕೆಎಸ್‌ಆರ್‌ಟಿಸಿ, ಚಿತ್ರದುರ್ಗ ವಿಭಾಗ, ಚಿತ್ರದುರ್ಗ (ಜಿ.ಸುರೇಶ್, ವಿಭಾಗೀಯ ಸಂಚಲನಾಧಿಕಾರಿಗಳು, ಮೊಬೈಲ್ ಸಂಖ್ಯೆ 9606908962 ಅವರನ್ನು ಸಂಪರ್ಕಿಸಬಹುದು. ಇವರೊಂದಿಗೆ ನಿರಂತರ ಸಂಪರ್ಕವನ್ನು ಇಟ್ಟುಕೊಂಡು ಚುನಾವಣೆಯ ಕೆಲಸವನ್ನು ಕಟ್ಟುನಿಟ್ಟಾಗಿ ನಿರ್ವಹಿಸಲು ಸೂಚನೆ ನೀಡಿದ್ದಾರೆ.

# ಸೋಲಿನತ್ತ ಕಾಂಗ್ರೆಸ್ ಹೆಜ್ಜೆ: ಕಾರಜೋಳ

» ಚಳ್ಳಕೆರೆ



ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ಜೆಡಿಎಸ್, ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿಗಳು ಚುನಾವಣಾ ಪ್ರಚಾರದಲ್ಲಿ ನಿರತರಾಗಿದ್ದು, ಎಲ್ಲೆಡೆ ಬಿಜೆಪಿಯ ಚುನಾವಣಾ ಬಹಿರಂಗ ಸಭೆಗಳಿಗೆ ನಿರೀಕ್ಷೆಗೂ ಮೀರಿ ಹೆಚ್ಚು ಜನರು ಸೇರುತ್ತಿದ್ದು, ಬಿಜೆಪಿಯ ಜನಪ್ರಿಯತೆಗೆ ಅಡ್ಡಿ ಉಂಟು ಮಾಡುವ ಉದ್ದೇಶದಿಂದ ಕಾಂಗ್ರೆಸ್ ಪಕ್ಷ ಮಾದ್ಯಮಗಳಲ್ಲಿ ಸುಳ್ಳು ಮಾಹಿತಿ ನೀಡಿ ಜನರನ್ನು ಮರಳು ಮಾಡುತ್ತಿದೆ. ಆದರೆ, ನಾಡಿನ ಜನತೆಗೆ ಪ್ರಧಾನಮಂತ್ರಿ ನರೇಂದ್ರಮೋದಿಯವರ ಮೇಲಿರುವ ಅಪಾರವಾದ ವಿಶ್ವಾಸ ಗೌರವ ಗೆಲುವಿಗೆ ಸಹಕಾರಿಯಾಗಲಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಎಂ.ಕಾರಜೋಳ ತಿಳಿಸಿದರು.

ತಾಲ್ಲೂಕಿನ ಗಡಿಭಾಗದ ಜಿಲ್ಲಾ ಪಂಚಾಯಿತಿ ಕ್ಷೇತ್ರವಾದ ಜಾಜೂರು ಹಾಗೂ ಜಾಜೂರು ವ್ಯಾಪ್ತಿಯ ಗ್ರಾಮಗಳಲ್ಲಿ ಬಿರುಸಿನ ಚುನಾವಣಾ ಪ್ರಚಾರ ನಡೆಸಿದರು. ಜಾಜೂರು ಗ್ರಾಮದಲ್ಲಿ ಏರ್ಪಡಿಸಿದ್ದ ಬಿಜೆಪಿಯ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರಮೋದಿಯವರಂ ೋಜನೆಗಳು ವಿಶ್ವಮಟ್ಟದಲ್ಲಿ ಜನಪ್ರಿಯತೆ ಗಳಿಸಿದೆ. ಮೋದಿಯವರಂತಹ ದಕ್ಷ, ಪ್ರಾಮಾಣಿಕ ಪ್ರಧಾನಿಯನ್ನು ಕಾಣಲು ಸಾಧ್ಯವಿಲ್ಲ ಎಂದರು.

ರಾಷ್ಟ್ರದ ಹಿತಕ್ಕಾಗಿ ಪ್ರತಿನಿತ್ಯ 20 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ಪ್ರಧಾನಿ ಎಂದರೆ ಅದು ಮೋದಿ. ಆದರೆ, ಮೋದಿಯವರಜನಪ್ರಿಯತೆಕಾಂಗ್ರೆಸ್‌ಪಕ್ಷದ ವಿಜಯಕ್ಕೆ ಅಡ್ಡಿಯಾಗುತ್ತದೆ. ಆದ್ದರಿಂದಲೇ ಯಾವುದೇ ಆರೋಪವಿಲ್ಲದಿದ್ದರೂ ಮೋದಿಯವರ ವಿರುದ್ದ ಸುಳ್ಳು ಆರೋಪ ಮಾಡುತ್ತಾರೆ. ಕಳೆದ ಹತ್ತು ವರ್ಷಗಳಿಂದ ರಾಷ್ಟ್ರವನ್ನಾಳಿದ ಪ್ರಧಾನಿ ಮೋದಿ ಹಾಗೂ ಅವರ ಸಂಪುಟದ ಸಚಿವರ ಮೇಲೆ ಯಾವುದೇ ಭ್ರಷ್ಟಾಚಾರದ ಆರೋಪವಿಲ್ಲ. ಇಂತಹ ಜನಪ್ರಿಯತೆಯನ್ನು ಹೊಂದಿದ ಸರ್ಕಾರವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವ ದೃಢ ನಿರ್ಧಾರ ಮತದಾರರದ್ದು. ಚಿತ್ರದುರ್ಗ ಜಿಲ್ಲೆಯ ನೀರಾವರಿ ಸಮಸ್ಯೆಯೂ ಸೇರಿದಂತೆ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ನೀಡಲು ಬಿಜೆಪಿ ಸಿದ್ದವಿದೆ. ಕಾಂಗ್ರೆಸ್‌ನ ಅಪಪ್ರಚಾರಕ್ಕೆ ಮರಳಾಗದೆ ಮತದಾರರು ಬಿಜೆಪಿಯನ್ನು ಆಯ್ಕೆ ಮಾಡಿ ಮೋದಿಯವರಿಗೆ ಶಕ್ತಿ ತುಂಬಬೇಕು ಎಂದರು.

ಬಿಜೆಪಿ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ವಾಣಿವಿಲಾಸ ಕುಡಿಯುವ ನೀರೂ ಸೇರಿದಂತೆ ಹಲವಾರು ಯೋಜನೆಗಳಿಗೆ ಅಂದಿನ ಶಾಸಕರಾಗಿದ್ದ ತಿಪ್ಪೇಸ್ವಾಮಿ ಕಾರಣಕರ್ತರು. ರಾಜ್ಯದಲ್ಲಿ ಪರಿಶಿಷ್ಟ ಜಾತಿ, ವರ್ಗದ ಜನರಿಗೆ ಸುಮಾರು 25 ಸಾವಿರ ಎಕರೆ ಬಗರ್ ಹುಕ್ಕುಂ ಭೂಮಿಯನ್ನು ನೀಡಿದ ಕೀರ್ತಿ ಮಾಜಿ ಶಾಸಕ ಜಿ.ಬಸವರಾಜಮಂಡಿಮಠರವರದ್ದು. ಇವುಗಳ ಬಗ್ಗೆ ಜನರಲ್ಲಿ ಇನ್ನೂ ಉತ್ತಮ ಭಾವನೆ ಇದೆ. ಹಳೇಯ ಸಾಧನೆಗಳ ಬಗ್ಗೆ ಮರೆಮಾಚುವ ಕಾರ್ಯ ಆಗುತ್ತಿದೆ. ಈ ಬಗ್ಗೆ ಜನರು ಜಾಗೃತರಾಗಬೇಕು ಎಂದರು.

ಜೆಡಿಎಸ್ ಮುಖಂಡ ಎಂ.ರವೀಶ್‌ಕುಮಾರ್ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರ ಬಿಜೆಪಿ ಗೆಲುವಿನ ಕ್ಷೇತ್ರವಾಗಿ ಪರಿವರ್ತನೆಯಾಗಿದೆ. ವಿಶೇಷವಾಗಿ ನರೇಂದ್ರಮೋದಿಯವರ ಕೊಡುಗೆ ಜೊತೆಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಸೇವೆಯನ್ನು ಜನ ಇಂದು ಸ್ಮರಿಸುತ್ತಾರೆ.

ಜೆಡಿಎಸ್ ಬಿಜೆಪಿ ಹೊಂದಾಣಿಕೆ ಕಾಂಗ್ರೆಸ್ ಗೆಲುವಿಗೆ ಕಗ್ಗಂಟಾಗಲಿದೆ. ಎರಡೂ ಪಕ್ಷಗಳ ಮೇಲೆ ಕಾಂಗ್ರೆಸ್ ಪಕ್ಷದ ನಾಯಕರು ಸುಳ್ಳು ಆರೋಪ ಮಾಡುವ ಮೂಲಕ ತಮ್ಮ ಸೋಲಿನ ಹಾದಿಯನ್ನು ಕಂಡುಕೊಂಡಿದ್ದಾರೆ ಎಂದು ತಿಳಿಸಿದರು.

ಡಿ.ಸೋಮಶೇಖರಮಂಡಿಮಠ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್, ಆರ್.ಅನಿಲ್‌ಕುಮಾರ್, ಜಯಪಾಲಯ್ಯ, ಬಿ.ಎಸ್.ಶಿವಪುತ್ರಪ್ಪ, ಸಿ.ಎಸ್.ಪ್ರಸಾದ್, ವಿ.ವೈ.ಪ್ರಮೋದ್, ಸಿ.ಶ್ರೀನಿವಾಸ್, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಮಲ್ಲಿಕಾರ್ಜುನ್, ಹೊಸಮನೆ ಮನೋಜ್, ಚಿದಾನಂದ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಬಿಜೆಪಿ ಕಾರಜೋಳ ಪರ ಕಾಂತರಾಜ್ ಮತಯಾಚನೆ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರ ಪರ ಜೆಡಿಎಸ್. ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ತಾಲ್ಲೂಕಿನ ಹದಿನೈದು ಪಂಚಾಯಿತಿಗಳಲ್ಲಿ ಮಂಗಳವಾರ ಬಿರುಸಿನ ಮತಯಾಚಿಸಿದರು.

ಜಾನುಕೊಂಡ, ಗೊಡಬನಹಾಳ್, ಅನ್ನೆಹಾಳ್, ಸೊಂಡೆಕೊಳ, ಹುಲ್ಲೂರು, ಹಿರೇಗುಂಟನೂರು, ಬೊಮ್ಮನಹಳ್ಳಿ, ಭೀಮಸಮುದ್ರ, ಸಿದ್ದಾಪುರ, ಐನಳ್ಳಿ, ಲಕ್ಷ್ಮಿಸಾಗರ, ಹಾಲಘಟ್ಟ, ಮಠದಕುರುಬರಹಟ್ಟಿ, ಚೋಳಘಟ್ಟ ಗ್ರಾಮ ಪಂಚಾಯಿತಿಗಳಲ್ಲಿ ಬಿಜೆಪಿ. ಅಭ್ಯರ್ಥಿ ಪರ ಮತಯಾಚಿಸಿದ ಬಿ.ಕಾಂತರಾಜ್, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ. ಜೆಡಿಎಸ್. ಮೈತ್ರಿ ಮಾಡಿಕೊಂಡಿರುವುದರಿಂದ ಅಭ್ಯರ್ಥಿಯ ಗೆಲುವು ನಿಶ್ಚಿತ. ಕೇಂದ್ರದಲ್ಲಿ ಮೂರನೆ ಬಾರಿಗೆ ನರೇಂದ್ರಮೋದಿ ಪ್ರಧಾನಿಯಾಗಬೇಕಾಗಿರುವ ುದರಿಂದ ಗೋವಿಂದ ಕಾರಜೋಳರವರನ್ನು ಬಹುಮತಗಳಿಂದ ಗೆಲ್ಲಿಸಿ ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಮತದಾರರಲ್ಲಿ ವಿನಂತಿಸಿದರು.

ಜೆಡಿಎಸ್. ತಾಲ್ಲೂಕು ಘಟಕದ ಅಧ್ಯಕ್ಷ ಸಣ್ಣತಿಮ್ಮಣ್ಣ, ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿನಾಯಕ, ವಿದ್ಯಾರ್ಥಿ ಘಟಕದ ಅಬ್ಬು ಹಾಗೂ ಜೆಡಿಎಸ್. ಕಾರ್ಯಕರ್ತರು ಮತಯಾಚನೆಯಲ್ಲಿ ಪಾಲ್ಗೊಂಡಿದ್ದರು.

## ನಗರದಲ್ಲಿ ಬಿಜೆಪಿ ಮತಯಾಚನೆ



» ಚಿತ್ರದುರ್ಗ

ಭಾರತೀಯ ಜನತಾ ಪಾರ್ಟಿಯವತಿಯಿಂದ ಎನ್.ಡಿ.ಎ ಅಭ್ಯರ್ಥಿ ಗೋವಿಂದ ಕಾರಜೋಳರವರ ಪರವಾಗಿ ಇಂದು ನಗರದ 22ನೇ ವಾರ್ಡನ ಜೆಸಿಆರ್ ಬಡಾವಣೆಯ 1 ರಿಂದ 5 ನೇ ಕ್ರಾಸ್‌ವರೆಗೆ ಬಿಜೆಪಿ ಮುಖಂಡ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ನೇತೃತ್ವದಲ್ಲಿ ಮನೆ ಮನೆ ಪ್ರಚಾರವನ್ನು ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರವಿಕುಮಾರ್ ಇಂದಿನ ದಿನಮಾನದಲ್ಲಿ ರಾಜ್ಯದಲ್ಲಿ ಆರಾಜಕತೆ ತಾಂಡವಾಡುತ್ತಿದೆ. ಎಲ್ಲಿ ಅಲ್ಲಿ ಅಂದರೆ ಕೊಲೆಗಳು ಅತ್ಯಾಚಾರಗಳು ದಲಿತರ ಮೇಲೆ ಹಲ್ಲೇ ನಡೆಯುತ್ತಿದೆ ರಾಜ್ಯದ ಜವಾಬ್ದಾರಿಯನ್ನು ಹೊತ್ತ ಕಾಂಗ್ರೆಸ್ ಸರ್ಕಾರ ಇದರ ಬಗ್ಗೆ ಉಡಾಫೆಯ ಮಾತನ್ನು ಆಡುತ್ತಿದೆ. ಜನತೆಯ ಬಗ್ಗೆ ಕಾಳಜಿಯನ್ನು ತೋರಿಸದೆ ಕೊಲೆ ಮತ್ತು ಹಲ್ಲೆಯನ್ನು ಮಾಡಿದವರ ಬಗ್ಗೆ ಕಾಳಜಿಯನ್ನು ತೋರುತ್ತಿದೆ, ಸಾವನ್ನಪ್ಪಿದವರ ಬಗ್ಗೆ ಸಾಂತ್ವಾನದ ಮಾತನ್ನು ಸಹಾ ಆಡುತ್ತಿಲ್ಲ ಎಂದು ಸರ್ಕಾರದ ವಿರುದ್ದ ಕಿಡಿ ಕಾರಿದರು.

ಏ.26ರಂದು ರಾಜ್ಯದಲ್ಲಿ ಮೊದಲ ಹಂತದ ಚುನಾವಣೆ ನಡೆಯಲಿದ್ದು, ಇದರಲ್ಲಿ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಇದರಲ್ಲಿ 14 ಕ್ಷೇತ್ರಗಳು ಸಹಾ ಬಿಜೆಪಿಯ ಪರವಾಗಿ ಫಲಿತಾಂಶ ಬರಲಿದೆ. ಇದ್ದಲ್ಲದೆ ಉಳಿದ 14 ಕ್ಷೇತ್ರಗಳಲ್ಲಿಯೂ ಸಹಾ ಬಿಜೆಪಿಯ ಪರವಾಗಿ ಉತ್ತಮವಾದ ಫಲಿತಾಂಶ ಬರಲಿದೆ, ಈ ಬಾರಿಯೂ ಕೇಂದ್ರದಲ್ಲಿ ಮೋದಿಯವರ ಸರ್ಕಾರ ಅಸ್ಥಿತ್ವಕ್ಕೆ ಬರುವುದು ಸಹಾ ನಿಶ್ಚಯವಾಗಿದೆ ಎಂದು ಭವಿಷ್ಯ ನುಡಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯರಾದ ಶ್ರೀಮತಿ ರೋಹಿಣಿ ನವೀನ್, ಬಿಜೆಪಿಯ ನಗರಾಧ್ಯಕ್ಷರಾದ ನವೀನ್ ಚಾಲುಕ್ಯ, ವಕ್ತಾರರಾದ ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೇ, ಮಲ್ಲಿಕಾರ್ಜುನ್, ಶ್ರೀನಾಥ್, ಪ್ರಕಾಶ್, ಸುರೇಶ್, ವೆಂಕಟೇಶ್, ಸೋಮಣ್ಣ, ರಮೇಶ್, ರವಿಕುಮಾರ್, ಪ್ರದೀಪ್, ಕಲಾ, ರೋಹಿಣಿ, ಸೋಮಶೇಖರ್, ಹಗ್ಗನಗೌಡ, ಸ್ವಾಮಿ, ಮಹೇಶ್, ಗೀತಾ ಸೇರಿದಂತೆ ಇತರರು ಭಾಗವಹಿಸಿದ್ದರು.

## ಹೊಳಲ್ಕೆರೆ ತಾಲ್ಲೂಕಿನ ಐವರು ಕಾಂಗ್ರೆಸ್‌ಗೆ ಸೇರ್ಪಡೆ

» ಚಿತ್ರದುರ್ಗ




ಕಳೆದ ವರ್ಷ ನಡೆದ ವಿಧಾನಸಭೆ ಚುನಾವಣೆಯಲ್ಲಿ ತಟಸ್ಥರಾಗಿದ್ದ ಹೊಳಲ್ಕೆರೆ ತಾಲ್ಲೂಕಿನ ವೆಂಕಟೇಶ್‌ನಾಯ್ಕ, ಬಸವರಾಜ್‌ನಾಯ್ಕ, ಪುಟ್ಟನಾಯ್ಕ, ಮಂಜು ಮಹೇಂದ್ರ, ದೊರೆ ಮಲ್ಲಿಕಾರ್ಜುನ್ ಇವರುಗಳು ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಹೊಳಲ್ಕೆರೆ ಮಾಜಿ ಶಾಸಕ ಎ.ವಿ.ಉಮಾಪತಿ ಇವರುಗಳ ಸಮ್ಮುಖದಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು.


ಪಕ್ಷದ ಭಾವುಟ ನೀಡಿ ಸೇರ್ಪಡೆ ಮಾಡಿಕೊಂಡು ಮಾತನಾಡಿದ ಮಾಜಿ ಶಾಸಕ ಎ.ವಿ.ಉಮಾಪತಿ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಬಿ.ಎನ್.ಚಂದ್ರಪ್ಪನವರ ಗೆಲುವಿಗೆ ಪ್ರಾಮಾಣಿಕವಾಗಿ ಶ್ರಮಿಸುವಂತೆ ಸೂಚಿಸಿದರು.

ಭೀಮಸಮುದ್ರದ ಜಿ.ಎಸ್.ಮಂಜುನಾಥ್, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿಗಳಾದ ನೇರ್ಲಗುಂಟೆ ರಾಮಪ್ಪ, ರವಿಕುಮಾರ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಬಿ.ಟಿ.ಜಗದೀಶ್, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್ ನಗರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸುಧಾ ಶ್ರೀನಿವಾಸ್‌ಮೂರ್ತಿ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

**ಪ್ರಮುಖ ಸುದ್ದಿ**

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ: ರವಿಕುಮಾರ್

» ಚಿತ್ರದುರ್ಗ




ಕಲ್ಬುರ್ಗಿಯ ಯಾದಗಿರಿಯಲ್ಲಿ ಮಾದಿಗ ಯುವಕನನ್ನು ಫಯಾಜ್ ಎನ್ನುವವನು ಮರ್ಮಾಂಗಕ್ಕೆ ಹೊಡೆದು ಕತ್ತು ಹಿಸುಕಿ ಕೊಲೆ ರಾಕೇಶ್‌ನನ್ನು ಮಾಡಿದ್ದಾನೆ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ವಿಧಾನಪರಿಷತ್ ಸಚೇತಕ ರವಿಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಚಿತ್ರದುರ್ಗದಲ್ಲಿ ಬಿಜೆಪಿ ಕಚೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿಮಾತಾಡಿದ ಅವರು ಹಸಿವಾಗಿದೆ ಎಂದು ರೊಟ್ಟಿ ತರಲು ಹೋದಾಗ, ರೊಟ್ಟಿ ಇಲ್ಲ ಎಂದು ಹೇಳಿ, ಕಳುಹಿಸಿ ನಂತರ ಬಂದು ಕೊಲೆ ಮಾಡಿದ್ದಾರೆ. ರಾಜ್ಯದಲ್ಲಿ ಹಿಂದುಗಳು, ಎಸ್ಸಿ ಎಸ್ಟಿಗಳು, ಮಹಿಳೆಯರ ಹತ್ಯೆಯಾಗುತ್ತಿದೆ. ಇದರ ಬಗ್ಗೆ ಪ್ರಾಮಾಣಿಕ ತನಿಖೆಯಾಗಬೇಕು. ಇದರ ಬಗ್ಗೆ ಎಸ್ಸಿ ಎಸ್ಟಿ ಮೋರ್ಚಾದಿಂದ ಹೋರಾಟಕ್ಕೆ ಕರೆ ಕೊಡುತ್ತಿದ್ದೇವೆ. ಸರ್ಕಾರದ ಕುಮ್ಮಕ್ಕಿನಿಂದ ಪೊಲೀಸ್ ಇಲಾಖೆ ನಡೆಯುತ್ತಿದೆ. ಘೋರ ಅನ್ಯಾಯ ನಡೆಯುತ್ತಿದೆ. ಕೂಡಲೇ ರಾಕೇಶ್ ನನ್ನು ಹತ್ಯೆ ಮಾಡಿದ ಫಯಾಜ್ ಮತ್ತು ಸಂಗಡಿಗರನ್ನು ಬಂಧಿಸಿ, ಕಠಿಣ ಶಿಕ್ಷೆ ಕೊಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಅಲ್ಪ ಸಂಖ್ಯಾತ ಯುವಕ, ಅಥವಾ ಯುವತಿಗೆ ಆಗಿದ್ದರೆ, ಸಿದ್ದರಾಮಯ್ಯ ಅವರ ಮಾತುಗಳು ಹೇಗಿರುತ್ತಿತ್ತು ಎಂದು ಪ್ರಶ್ನಿಸಿದರು. ರಾಜ್ಯದ ಜನತೆಗೆ ರಕ್ಷಣೆಗೆ ಕೊಡಲು ಆಗಿದಿದ್ದರೆ, ಎಸ್ಸಿ ಎಸ್ಟಿ ಗಳಿಗೆ ರಕ್ಷಣೆ ಕೊಡದೆ ಇದ್ದರೆ,ರಾಜೀನಾಮೆ ಕೊಟ್ಟು ಹೋಗಬೇಕು. ರಾಕೇಶ್ ಹತ್ಯೆಯ ಬಗ್ಗೆ ಪ್ರಾಥಮಿಕ ಜವಾಬ್ದಾರಿ ನಿರ್ವಹಿಸಲು ತಯಾರಿಲ್ಲ.ಆದ್ದರಿಂದ ನೇಹ ಹತ್ಯೆ, ರಾಕೇಶ್ ಹತ್ಯೆ ಹಾಗೂ ಹಿಂದೂಗಳ ಮೇಲೆ ದೌರ್ಜನ್ಯದ ಘಟನೆಗಳಿವೆ. ಇದರ ಬಗ್ಗೆ ಸೂಕ್ತ ತನಿಖೆಯಾಗಬೇಕು ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜೀವ್ ಮಾತಾಡಿ, ಮೂರು ದಿನಗಳಲ್ಲಿ ಎಂಟು ಬರ್ಬರ ಕೊಲೆಗಳಾಗಿವೆ. ಈ ಸರ್ಕಾರ ರಾಜ್ಯದಲ್ಲಿ ತಾಲಿಬಾನ್ ಆಡಳಿತ ಜಾರಿಗೆ ತಂದಿದೆ. ಸಿಎಂ ಶಾಂತಿ ನಾಡು ಕರ್ನಾಟಕವನ್ನು ತಾಲಿಬಾನ್ ಗೆ ತೆಗೆದುಕೊಂಡು ಹೋಗಿದ್ದಾರೆ. ರಾಕೇಶ್ ಮನೆ ನುಗ್ಗಿ ಪೋಷಕರೆದುರು,ಎಂಟು ಜನರು ಬರ್ಬರವಾಗಿ ಹತ್ಯೆ ಮಾಡಿದ್ದಾರೆ. ನಿನ್ನೆ ರಾತ್ರಿ ಘಟನೆ ನಡೆದಿದೆ. ಆದರೆ ಎಫ್ ಐ ಆರ್ ಆಗಿದ್ದು, ಇಂದು ಮಧ್ಯಾಹ್ನ ,ಮಾನ ಗೆಟ್ಟ ,ನಾಚಿಕೆ ಇಲ್ಲದ ಸರ್ಕಾರ ಇದು.ಯಾರನ್ನೋ ಓಲೈಸುಲು ಪೊಲೀಸ್ ಇಲಾಖೆ ಪ್ರಕರಣ ಮುಚ್ಚಿ ಇಲಾಖೆ ಮುಂದಾಗಿತ್ತು. ನಿಮಗೆ ನಾಚಿಕೆ ಆಗಲಿಲ್ವ ದಲಿತ ಎನ್ನುವ ಮಾನವೀಯತೆ ನಿಮಗೆ ಇದ್ದರೆ ನೀವು ಕೂಡಲೇ ರಾಜೀನಾಮೆ ಕೊಟ್ಟು ಹೋಗಬೇಕು.ನೀವು ಅನ್ ಫಿಟ್ ಫಾರ್ ದ ಹೋಂ ಮಿನಿಸ್ಟರ್ ಪೋಸ್ಟ್ ಎಂದು ಪರಮೇಶ್ವರ್ ವಿರುದ್ಧ ಕಿಡಿ ಕಾರಿದರು.

ಈ ಸರ್ಕಾರ ದಲಿತರು ಮಹಿಳೆಯರು, ಹಿಂದೂಗಳು, ದಲಿತರಿಗೆ ರಕ್ಷಣೆ ಇಲ್ಲವಾಗಿದೆ. ಈ ಸರ್ಕಾರ ತುಷ್ಟಿಕರಣದ ಪರಾಕಾಷ್ಟೆಗೆ ಹೋಗಿದೆ. ಸಿಎಂ ಸಿದ್ದರಾಮಯ್ಯ, ಹಾಗೂ ಗೃಹ ಸಚಿವ ಪರಮೇಶ್ವರ್ ಅವರೇ ನೀವು ದಲಿತರಿಗೆ ಉತ್ತರ ಕೊಡಿ ಎಂದು ಆಗ್ರಹಿಸಿದರು.

ಸಂತೋಷ್ ಲಾಡ್ ಅವರಿಗೆ ಯಾವ ದುಖಃ , ಸಂತೋಷ ಯಾವುದು ಎಂದು ಅರ್ಥ ಮಾಡಿಕೊಳ್ಳದೆ ಇರುವ ಬೇಜಾಬ್ದಾರಿ ಮಂತ್ರಿ, ಅವರು ಜವಾಬ್ದಾರಿಯಿಂದ ಉತ್ತರ ಕೊಡಬೇಕು. ಬಿಜೆಪಿ ಯಾವುದೇ ಹತ್ಯೆ ಆದರೂ ಖಂಡಿಸುತ್ತದೆ. ಈ ಸರ್ಕಾರದಲ್ಲಿ ಮಾನವ ಜೀವಿಗಳಿಗೆ ಬೆಲೆ ಇಲ್ಲದಾಗಿದೆ. ಇದೊಂದು ಅಮಾನವೀಯ ಸರ್ಕಾರವಾಗಿದೆ. ಲಕ್ಷಾಂತರ ಜನ ವಿದ್ಯಾರ್ಥಿಗಳ ಬಗ್ಗೆ ಕಾಳಜಿ ಇಲ್ಲ. ಸಿಎಂ ಯಾವುದಕ್ಕೂ ಕೇರ್ ಮಾಡಲ್ಲ, ಸರ್ಕಾರ ಕೂಡಲೇ ರಾಜೀನಾಮೆ ಕೊಟ್ಟು ಹೋಗಬೇಕು. ಇಲ್ಲದೆ ಹೋದರೆ 26 ರ ನಂತರ ಮತದಾನದ ಮೂಲಕ ಸರಿಯಾದ ಪಾಠ ಕಲಿಸುತ್ತಾರೆ. ಇದು ಎರಡನೇ ಟಿಪ್ಪು ಆಡಳಿತ ನಡೆಯುತ್ತಿದೆ. ಸಿದ್ದರಾಮಯ್ಯ ಟಿಪ್ಪು ಸುಲ್ತಾನ್ ಎರಡನೇ ಅವತಾರ, ಅನ್ ಡೆಮೋಕ್ರಟಿಕ್ ಆಡಳಿತ ಮಾಡುತ್ತಿದ್ದಾರೆ.ಸರ್ಕಾರದ ಧೋರಣೆ ಖಂಡಿಸಿ ಪ್ರತಿಭಟನೆಯನ್ನು ಇಂದು ರಾತ್ರಿ ಮತ್ತು ನಾಳೆ ರಾಜ್ಯದಾದ್ಯಂತ ಮಾಡುತ್ತೇವೆ ಎಂದರು.ಈ ಸಮಯದಲ್ಲಿ, ರಾಜ್ಯ ಪ್ರಧಾನ ಕಾರ್ಯದರ್ಶಿ, ರಾಜೀವ್,ರವಿಕುಮಾರ್, ರಾಜ್ಯ ಎಸ್ಸಿ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಉಮೇಶ್ ಕಾರಜೋಳ,ರಾಜ್ಯ ಮಾಧ್ಯಮ ಸದಸ್ಯ ಅವಿನಾಶ್, ಮಂಡಲ ಉಪಾಧ್ಯಕ್ಷ ಸುರೇಶ್ ನಾಯ್ಕ್‌ಇದ್ದರು.

# ಸುಳ್ಳು ಆಶ್ವಾಸನೆ ನೀಡುವ ಬಿಜೆಪಿಯನ್ನು ಜನತೆ ಅಧಿಕಾರಿದಿಂದ ದೂರವಿಡಬೇಕು: ಟಿ.ರಘುಮೂರ್ತಿ

» **ಚಳ್ಳಕೆರೆ**

ರಾಜ್ಯದಲ್ಲಿ 10 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಎನ್‌ಡಿಎ ನೇತೃತ್ವದ ಮೈತ್ರಿಕೂಟದ ಪ್ರಧಾನಮಂತ್ರಿ ನರೇಂದ್ರಮೋದಿ ಸುಳ್ಳು ಭರವಸೆಗಳ ಮೂಲಕ ಜನರನ್ನು ದಾರಿ ತಪ್ಪಿಸುವ ಕಾರ್ಯವನ್ನು ನಿರಂತರ ಮಾಡುತ್ತಾ ಬಂದಿದ್ದಾರೆ.ಕ್ಷೇತ್ರದ ಜನತೆ ವಾಸ್ತಾಂವಶನ್ನು ಅರಿತಿದ್ದು, ಸುಳ್ಳು ಪ್ರಚಾರದಿಂದ ಬಿಜೆಪಿ ಗೆಲುವು ಸಾಧಿಸದು ಎಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಮಂಗಳವಾರ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚಳ್ಳಕೆರೆ ನಗರದ 8,9,10,11 ಮತ್ತು 30ನೇ ವಾರ್ಡ್ ವ್ಯಾಪ್ತಿಯಲ್ಲಿ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಪರ ಮತಯಾಚನೆ ಮಾಡಿದರು. ರಹೀಂನಗರದ ಮುಸ್ಲಿಂ ಸಮಾಜದ ಬಂಧುಗಳು ಸಮಾಜದ ಪರವಾಗಿ



ಶಾಸಕರಿಗೆ ಪ್ರಚಾರದ ಸಂದರ್ಭದಲ್ಲೇ ಗೌರವ ಸಮರ್ಪಿಸಿದರು. ಚಳ್ಳಕೆರೆ ವಿಧಾನಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಈಗಾಗಲೇ ಮೂರು ಸುತ್ತಿನ ಪ್ರಚಾರ ಕೈಗೊಂಡಿದ್ದು, ಈ ಬಾರಿ ಪ್ರತಿಯೊಬ್ಬ ಮತದಾರನ ಮನೆ, ಮನೆಗೂ ಭೇಟಿ ನೀಡಿ ಪಕ್ಷದ ಭರವಸೆಗಳ ಬಗ್ಗೆ ಕರಪತ್ರ ನೀಡಲಾಗಿದೆ. ಕಾಂಗ್ರೆಸ್ ಪಕ್ಷದ ಬಗ್ಗೆ ಜನರಲ್ಲಿ ವಿಶ್ವಾಸ ಹೆಚ್ಚಾಗುತ್ತಿದ್ದು, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಮತ್ತೊಮ್ಮೆ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲಿದೆ ಎಂದರು.

ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ಟಿ.ರವಿಕುಮಾರ್, ಅನ್ವರ್ ಮಾಸ್ಟರ್, ಮುಜೀಬುಲ್ಲಾ, ನಗರಸಭಾ ಸದಸ್ಯರಾದ ಎಂ.ಜೆ.ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಸುಜಾತಪಾಲಯ್ಯ, ಎಚ್.ಎಸ್.ಸೈಯದ್,ಮೂಡಲಗಿರಿಯಪ್ಪ, ಬಿ.ಪಿ.ಪ್ರಕಾಶ್‌ಮೂರ್ತಿ ಮನು, ಬಿ.ಎಂ.ಭಾಗ್ಯಮ್ಮ, ಲಕ್ಷ್ಮೀದೇವಿ, ಗೀತಾಬಾಯಿ, ಭಾಗ್ಯಲಕ್ಷ್ಮಿ, ಮಂಜಮ್ಮ, ಸೌಭಾಗ್ಯಮ್ಮತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಮತದಾನದ ಹಕ್ಕನ್ನು ಪಡೆಯುವ ಮೂಲಕ ಚುನಾಯಿತ ಪ್ರತಿನಿಧಿ ಆಯ್ಕೆಗೆ ಸಹಕಾರ

» **ಚಳ್ಳಕೆರೆ**

ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಸಂಬಂಧಪಟ್ಟಂತೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ತಿಂಗಳ 26ರಂದು ನಡೆಯುವ ಮತದಾನಕ್ಕೆ ಸಂಬಂಧಪಟ್ಟಂತೆ ಎಲ್ಲಾ ರೀತಿಯ ವ್ಯವಸ್ಥೆಯನ್ನು ಪರಿಪೂರ್ಣವಾಗಿ ಮಾಡಿದೆ ಎಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ತಿಳಿಸಿದರು.

ಅವರು, ಮಂಗಳವಾರ ನಗರದ ಖಾಸಗಿ ಬಸ್ಟಾಂಡ್‌ನ ಎಸ್‌ಆರ್‌ಕಾಂಪ್ಲೆಕ್ಸ್ ಬಳಿ ನಾನು ಹೆಮ್ಮೆಯ ಮತದಾರ, ಸಹಿ ಸಂಗ್ರಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಚುನಾವಣಾ ಆಯೋಗ ಈ ಬಾರಿಯ ಮತದಾನಕ್ಕೆ ಸಂಬಂಧಪಟ್ಟಂತೆ ಹಲವಾರು ನೂತನ ಯೋಜನೆಗಳನ್ನು ಜಾರಿಗೆ ತಂದಿದೆ. ಮತದಾರರ ಪಟ್ಟಿಯಲ್ಲಿ




ಹೆಸರು ನಮೂದಾಗಿರುವ ಪ್ರತಿಯೊಬ್ಬ ಮತದಾರರನ್ನು ನಾನು ಈ ದೇಶದ ಹೆಮ್ಮೆಯ ಮತದಾರ. ಮತದಾನ ಮಾಡುವುದು ನನ್ನ ಕರ್ತವ್ಯ ಸಂವಿಧಾನಾತ್ಮಕವಾಗಿ ಬಂದ ಹಕ್ಕನ್ನು ಚಲಾಯಿಸಲು ನನಗೆ ಸಂತಸವೆನ್ನಿಸುತ್ತದೆ. ನಾನೂ ಸಹ ಮತದಾನ ಮಾಡುವ ಅವಕಾಶವನ್ನು ಪಡೆದಿದ್ದೇನೆಂಬ ಸಂತೋಷ ಪಡಬೇಕಲ್ಲದೆ ತಪ್ಪದೆ ಮತದಾನ ಮಾಡಬೇಕೆಂಬ ದೃಷ್ಠಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷ, ಕಾರ್ಯನಿರ್ವಾಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್, ಸ್ವೀಪ್ ಸಮಿತಿ ಕಾರ್ಯದರ್ಶಿ, ಪೌರಾಯುಕ್ತ ಜೀವನ್‌ಕಟ್ಟಿಮನಿ, ಎಸಿಪಿಒ ಸಂತೋಷ್‌ಕುಮಾರ್, ಪಿಡಿಒ ರಜನಿಕಾಂತ್, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಸುನೀಲ್, ಗೀತಾಕುಮಾರಿ, ತಿಪ್ಪೇಸ್ವಾಮಿ, ವೀರಭದ್ರಿ, ಚೇತನ್, ಎಸ್.ಎಲ್. ಮಂಜಣ್ಣ, ಚುನಾವಣಾಧಿಕಾರಿ ಇಲಾಖೆ ಶ್ರೀಧರ, ಓಬಳೇಶ, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಕಾಂಗ್ರೆಸ್‌ಗೆ ಕಾಡುಗೊಲ್ಲ ಸಂಘದಿಂದ ಬೆಂಬಲ: ಶಿವುಯಾದವ್



» **ಚಳ್ಳಕೆರೆ**

ಪ್ರಸ್ತುತ ಚಿತ್ರದುರ್ಗ ಲೋಕಸಭಾ ಕ್ಷೇತ್ರವೂ ಸೇರಿದಂತೆ ರಾಜ್ಯದ ಎಲ್ಲಾ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮತ ನೀಡುವಂತೆ ಕಾಡುಗೊಲ್ಲ ಸಮುದಾಯಕ್ಕೆ ನಿರ್ದೇಶನ ನೀಡಲಾಗಿದೆ ಎಂದು ಕಾಡುಗೊಲ್ಲ ಮಹಾಸಭಾದ ಅಧ್ಯಕ್ಷ ಶಿವುಯಾದವ್ ತಿಳಿಸಿದರು. ಅವರು ನಗರದ ಶಾಸಕರ ಖಾಸಗಿ ನಿವಾಸದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಕಾಡುಗೊಲ್ಲ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷ ಸಾಕಷ್ಟು ಸೌಲಭ್ಯಗಳನ್ನು ನೀಡಿದೆ. ಮುಂದಿನ ದಿನಗಳಲ್ಲೂ ಜನಾಂಗದ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳ ಮೂಲಕ ಆಸರೆಯಾಗಲಿದೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವಂತೆ ಮನವಿ ಮಾಡಲಾಗಿದೆ ಎಂದರು. ಕರ್ನಾಟಕ ಕಾಡುಗೊಲ್ಲ ಸಂಘದ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಮಾತನಾಡಿ, ಈ ಪ್ರಸ್ತುತ ಲೋಕಸಭಾ ಚುನಾವಣೆಯಲ್ಲಿ ಕಾಡುಗೊಲ್ಲ ಸಮುದಾಯ ಕಾಂಗ್ರೆಸ್ ಪಕ್ಷಕ್ಕೆ ತನ್ನ ಬೆಂಬಲವನ್ನು ವ್ಯಕ್ತಪಡಿಸಿದೆ. ಈ ಹಿನ್ನೆಲೆಯಲ್ಲಿ ಸಮುದಾಯ ಎಲ್ಲಾ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತಯಾಚನೆ ಮಾಡುವಂತೆ ಪತ್ರಿಕಾ ಹೇಳಿಕೆ ಮೂಲಕ ಮನವಿ ಮಾಡಲಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಗೌರವಾಧ್ಯಕ್ಷ ಕೂನಿಕೆರೆರಾಮಣ್ಣ, ಬಸವರಾಜು, ಚೇತನ್‌ಶಿವನಹಳ್ಳಿ, ಆರ್.ಪ್ರಸನ್ನಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ಸಿಐಟಿಯು ಕಾರ್ಮಿಕ ಸಂಘಟನೆ ಬೆಂಬಲ : ಸಿಐಟಿಯು ಕಾರ್ಮಿಕ ಸಂಘಟನೆಗಳ ತಾಲ್ಲೂಕು ಅಧ್ಯಕ್ಷ ಟಿ.ನಿಂಗಣ್ಣ ಪತ್ರಿಕಾ ಹೇಳಿಕೆ ನೀಡಿ,

# ತುಪ್ಪದಹಳ್ಳಿಯಲ್ಲಿ ಬಿಜೆಪಿ ಕಾರ್ಯಕರ್ತರಿಂದ ಪ್ರಚಾರ

» **ಹೊಳಲ್ಕೆರೆ**

ಬಿಜೆಪಿ ಪಕ್ಷವನ್ನು ಕೇಂದ್ರದಲ್ಲಿ ಅಧಿಕಾರಕ್ಕೆ ತರಲು ಬಿಜೆಪಿ ಪಕ್ಷದ ಚಿತ್ರದುರ್ಗ ಸಂಸತ್ ಅಭ್ಯರ್ಥಿ ಗೋವಿಂದ ಕಾರಜೋಳರಿಗೆ ಮತ ನೀಡಬೇಕೆಂದು ಬಿಜೆಪಿ ಪಕ್ಷದ ಮಾಜಿ ಜಿಲ್ಲಾಧ್ಯಕ್ಷ ಜಿ.ಎಂ.ಸುರೇಶ್ ತಿಳಿಸಿದರು.

ತಾಲ್ಲೂಕಿನ ರಾಮಗಿರಿ. ಬಿದುರ್ಗ, ಸೇರಿ ವಿವಿಧ ಹಳ್ಳಿಗಳಲ್ಲಿ ಮಂಗಳವಾರ ಬಿಜೆಪಿ ಪಕ್ಷದ ಪರ ಮನೆಗಳಿಗೆ ತೆರಳಿ ಪ್ರಚಾರ ನಡೆಸಿ, ಮತಯಾಚಿಸಿ ಮಾತನಾಡಿದರು.

ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ 40 ವರ್ಷಗಳಿಂದ ಬಿಜೆಪಿ ಪಕ್ಷವನ್ನ ಕಟ್ಟಿ ಬೆಳೆಸಿ ಹೋರಾಟ ಕೈಗೊಂಡಿದ್ದೇವೆ. ಅದರ ಪರಿಣಾಮವಾಗಿ ಬಿಜೆಪಿ ಪಕ್ಷ ಕ್ಷೇತ್ರದಲ್ಲಿ ಸುಭದ್ರವಾಗಿದೆ. ಎರಡು ಭಾರಿ ಎಂ.ಪಿ. ಮೂರು ಭಾರಿ ಎಂಎಲ್‌ಎ ಜನರು ಗೆಲ್ಲಿಸಿದ್ದಾರೆ. ಜನರು ಈ ಭಾರಿ ಬಿಜೆಪಿ ಪಕ್ಷಕ್ಕೆ ಬೆಂಬಲಿಸಲು ತುದಿಗಾಲಲ್ಲಿ ನಿಂತಿದ್ದು, ಬಿಜೆಪಿ ಪಕ್ಷಕ್ಕೆ ಬಹುಮತ ಸಿಗುವ ವಿಶ್ವಾಸ ವ್ಯಕ್ತ ಪಡಿಸಿದರು. .ಬಿಜೆಪಿ ಜಿಲ್ಲಾ ಖಚಾಂಚಿ ಎಸ್. ಆರ್.ಗಿರೀಶ್ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ದೇಶದ ಭದ್ರತೆ ಹೆಚ್ಚಾಗಲಿದೆ. ದೇಶದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರನಿಯಂತ್ರಣವಾಗಲಿದೆ.ರಸ್ತೆಅಭಿವೃದ್ಧಿ,. ಶೈಕ್ಷಣಿಕ ಕ್ಷೇತ್ರ ಬದಲಾವಣೆ, ನೀರಾವರಿಯ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತದೆ. ಈ ನಿಟ್ಟಿನಲ್ಲಿ ಕೇಂದ್ರದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಬೇಕು. ಹಾಗಾಗಿ ಚಿತ್ರದುರ್ಗದ ಸಂಸತ್ ಕ್ಷೇತ್ರವನ್ನು ಗೆಲ್ಲಬೇಕಾದರೆ ಬಿಜೆಪಿ ಪಕ್ಷದ ಅಭ್ಯರ್ಥಿ ಗೋವಿಂದಕಾರಜೋಳ್ ಇವರಿಗೆ ಮತ ನೀಡಬೇಕೆಂದರು.ಮಾಜಿ ಅಧ್ಯಕ್ಷ ರಾಜಶೇಖರ್ ಮಾತನಾಡಿ, ಬಿಜೆಪಿ ಪಕ್ಷಕ್ಕೆ ಮತ ನೀಡುವಂತೆ ಜನರಿಗೆ ಜಾಗೃತಿ ಮೂಡಿಸಲಾಗುತ್ತದೆ. ಜನರು ಬಿಜೆಪಿ ಪಕ್ಷವನ್ನ ಗೆಲ್ಲಿಸಲು ಹೆಚ್ಚಿನ ಮತ ನೀಡಲಿದ್ದಾರೆ. ಕ್ಷೇತ್ರದಲ್ಲಿ ಬಿಜೆಪಿ ಪಕ್ಷಕ್ಕೆ ಒಂದು ಲಕ್ಷಕ್ಕೂ ಅಧಿಕ ಮತ ಸಿಕ್ಕಲ್ಲಿದೆ ಎಂದರು. ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಧನಂಜಯ್ ನಾಯ್ಕ ಮಾತನಾಡಿ, ದೇಶದ ಭದ್ರತೆಗೆ ನಾವೆಲ್ಲರೂ ಬಿಜೆಪಿ ಪಕ್ಷಕ್ಕೆ ಬೆಂಬಲಿಸಬೇಕು. ಮೋದಿ ನೇತೃತ್ವದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಲು ಮತ ನೀಡಲು ಮನವಿ ಮಾಡಿದರು.



**ಪ್ರಮುಖ ಸುದ್ದಿ**

# ಖರ್ಚು ವೆಚ್ಚಗಳ ನಿಖರ ಮಾಹಿತಿ ನೀಡುವುದು ಅವಶ್ಯ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಚುನಾವಣಾ ಅಂತಿಮ ಕಣದಲ್ಲಿನ ಅಭ್ಯರ್ಥಿಗಳು ಚುನಾವಣಾ ಲೆಕ್ಕವನ್ನು ದಿನನಿತ್ಯ ನಿರ್ವಹಣೆ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಅಂತಿಮ ಚುನಾವಣಾ ಕಣದಲ್ಲಿ ಉಳಿದ ಅಭ್ಯರ್ಥಿಗಳಿಗೆ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಮಾಹಿತಿ ನೀಡಿದರು. ಪ್ರತಿ ಅಭ್ಯರ್ಥಿಗಳಿಗೆ ರೂ.95 ಲಕ್ಷದವರೆಗೆ ಖರ್ಚುವೆಚ್ಚ ಮಾಡಲು ಅವಕಾಶ ಇರುತ್ತದೆ. ಎಲ್ಲಾ ಅಭ್ಯರ್ಥಿಗಳು ಖರ್ಚುವೆಚ್ಚದ ಲೆಕ್ಕವನ್ನು ಪಾರ್ಟ್.ಎ ರಡಿ ಪ್ರತಿನಿತ್ಯದ ವರದಿ ಇದರಲ್ಲಿ ಖರ್ಚು ಮತ್ತು ಹಣದ ಮೂಲ ನಮೂದು ಮಾಡಬೇಕು ಎಂದರು.

ದೇಣಿಗೆ ಬಂದಿದ್ದಲ್ಲಿ ಅವರ ವಿವರ ನಮೂದಿಸಬೇಕು. ಪಾರ್ಟ್.ಬಿ ರಡಿ ಕ್ಯಾಶ್ ಬುಕ್ ನಿರ್ವಹಣೆ ಮಾಡಬೇಕು. ಪಾರ್ಟ್.ಸಿ ರಡಿ ಬ್ಯಾಂಕ್ ಬುಕ್




ನಿರ್ವಹಣೆ ಮಾಡಬೇಕು. ರೂ.10 ಸಾವಿರ ವರೆಗೆ ನಗದು ನೀಡಲು ಮಾತ್ರ ಅವಕಾಶ ಇದ್ದು ಇದಕ್ಕೂ ಮೇಲ್ಪಟ್ಟಲ್ಲಿ ಕ್ರಾಸ್ ಮಾಡಿದ ಚೆಕ್, ಆರ್.ಟಿ.ಜಿ.ಎಸ್ ಮಾಡಬೇಕು. ಖರ್ಚು ಮಾಡಿದ ಎಲ್ಲಾ ವ್ಯವಹಾರಕ್ಕೂ ರಸೀದಿ ಮತ್ತು ಬಿಲ್ಸ್‌ಗಳನ್ನು ಇಟ್ಟುಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಅಭ್ಯರ್ಥಿಗಳು ಪ್ರತಿನಿತ್ಯದ ಖರ್ಚುವೆಚ್ಚ ತಾಳೆಯನ್ನು ಏಪ್ರಿಲ್ 26, ಮೇ 2 ಮತ್ತು 6 ರಂದು ಅಕೌಂಟಿಂಗ್ ಟೀಂನೊಂದಿಗೆ ತಾಳೆ ಮಾಡಿಸಿಕೊಳ್ಳಬೇಕು. ನಂತರ ಅಂತಿಮವಾಗಿ ಫಲಿತಾಂಶ ಪ್ರಕಟವಾದ 26 ನೇ ದಿನ ವೆಚ್ಚ ವೀಕ್ಷಕರ ಸಮಕ್ಷಮ ಅಂತಿಮ ಹಂತದ ವೆಚ್ಚ ನಿರ್ವಹಣಾ ಸಭೆ ನಡೆಯಲಿದೆ. ಯಾರು ಸರಿಯಾಗಿ, ಸಮಯಕ್ಕೆ ನೀಡದಿದ್ದಲ್ಲಿ ಅಭ್ಯರ್ಥಿತನಕ್ಕೆ ತೊಂದರೆಯಾಗಲಿದೆ.

ಅಭ್ಯರ್ಥಿಗಳು ವಾಹನಗಳನ್ನು ಇಂತಿಷ್ಟೆ ಪಡೆಯಬೇಕೆಂಬ ಮಿತಿ ಇರುವುದಿಲ್ಲ, ಖರ್ಚುವೆಚ್ಚ ಮಾತ್ರ ಅಂದಾಜಿಸಲಾಗುತ್ತದೆ. ಯಾವುದೇ ಅಭ್ಯರ್ಥಿ ತನ್ನ ಹೆಸರಲ್ಲಿ ವಾಹನ ಪಡೆದು ಬೇರೊಬ್ಬರಿಗೆ ಉಪಯೋಗ ಮಾಡಲು ಅವಕಾಶ ಮಾಡಿದಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ ಎಂದರು.

ಎಂಸಿಎಂಸಿ ಅನುಮತಿ ಕಡ್ಡಾಯ; ಯಾವುದೇ ಎಲೆಕ್ಟ್ರಾನಿಕ್ಸ್ ವಿನ್ಯಾಸ, ಮಾಧ್ಯಮ, ವೆಬ್‌ಸೈಟ್, ವಾಯ್ಸ್ ಮೆಸೇಜ್, ಇನ್ನಿತರೆ ಜಾಹಿರಾತು ನೀಡಲು ಪೂರ್ವಾನುಮತಿ ಕಡ್ಡಾಯ ಅನುಬಂಧ-ಎ ರಡಿ ಸಲ್ಲಿಸಿ ಅನುಬಂಧ-ಬಿ ರಡಿ ಅನುಮತಿ ಪಡೆಯಬೇಕು. ಮತದಾನ ಮುಕ್ತಾಯವಾಗುವ 48 ಗಂಟೆ ಮುಂಚಿತವಾಗಿ ಮುದ್ರಣ ಮಾಧ್ಯಮಗಳಲ್ಲಿ ಜಾಹಿರಾತು ನೀಡಲು ಮಾತ್ರ ಅನುಬಂಧ-ಸಿ ರಡಿ ಮುಂಚಿತವಾಗಿ ಅರ್ಜಿ ಸಲ್ಲಿಸಿ ಅನುಮತಿ ಪಡೆಯಬೇಕು. ಅನುಮತಿ ಇದ್ದಲ್ಲಿ ಮಾತ್ರ 48 ಗಂಟೆಗಳ ಅವಧಿಯಲ್ಲಿ ಮುದ್ರಣ ಮಾಧ್ಯಮಗಳಲ್ಲಿ ಜಾಹಿರಾತು ಪ್ರಕಟಿಸಲು ಅವಕಾಶ ಇರುತ್ತದೆ ಎಂದರು.

ಚುನಾವಣಾ ವೀಕ್ಷಕರು ಜಿಲ್ಲೆಯಲ್ಲಿದ್ದು ಎಂಸಿಸಿ ದೂರುಗಳಿದ್ದಲ್ಲಿ ಅವರಿಗೂ ಮತ್ತು ಸಿವಿಜಿಲ್‌ಗೆ, ಟೋಲ್‌ಫ್ರೀ ಸಂಖ್ಯೆಗೂ ಮಾಹಿತಿ ನೀಡಬಹುದಾಗಿದೆ ಎಂದು ಚುನಾವಣಾ ಪ್ರಕ್ರಿಯೆಗಳ ಕುರಿತು ಅಭ್ಯರ್ಥಿಗಳಿಗೆ ಮಾಹಿತಿ ನೀಡಿದರು.

ಅಕೌಂಟಿಂಗ್ ನೋಡಲ್ ಅಧಿಕಾರಿ ಗಿರೀಶ್ ಪಿಪಿಟಿಯಲ್ಲಿ ಎಲ್ಲಾ ಮಾಹಿತಿ ನೀಡಿದರು. ಈ ವೇಳೆ ಸಾಮಾನ್ಯ ವೀಕ್ಷಕರಾದ ಎಂ.ಲಕ್ಷ್ಮೀ, ವೆಚ್ಚ ವೀಕ್ಷಕರಾದ ಪ್ರತಿಭಾಸಿಂಗ್, ಸಹಾಯಕ ಚುನಾವಣಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ಹಾಗೂ ಅಭ್ಯರ್ಥಿಗಳು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಲೋಕಸಭಾ ಚುನಾವಣೆ ಮತದಾನ ಜಾಗೃತಿಗೆ ತಾರಾ ಮೆರಗು



» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯುತ್ತಿದ್ದು ಪ್ರತಿ ಮತವೂ ಅಮೂಲ್ಯವಾಗಿದ್ದು ಒಂದೊಂದು ಮತಕ್ಕೂ ನಗಣ್ಯ ಶಕ್ತಿ ಇದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಮಂಗಳವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿಗೆ ಪಿ.ಬಿ ರಸ್ತೆಯಲ್ಲಿನ ರೇಣುಕಾ ಮಂದಿರದಲ್ಲಿ ಏರ್ಪಡಿಸಲಾದ ಸಂಗೀತ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ದಾವಣಗೆರೆ ನಗರದಲ್ಲಿ ಅನೇಕ ಮತಗಟ್ಟೆಗಳಲ್ಲಿ ಶೇ 55 ಕ್ಕಿಂತ ಕಡಿಮೆ ಮತದಾನ ಮಾಡಲಾಗಿದೆ. ಆದರೆ ಗ್ರಾಮಾಂತರ ಪ್ರದೇಶದಲ್ಲಿ ಶೇ 90 ಕ್ಕಿಂತಲೂ ಹೆಚ್ಚು ಮತದಾನವಾಗುತ್ತದೆ. ನಗರದಲ್ಲಿನ ಯುವ ಮತದಾರರು ಮತದಾನ ಮಾಡಲು ಮುಂದೆ ಬರುವುದರ ಜೊತೆಗೆ ಇತರೆ ನಾಗರೀಕರನ್ನು ಸಹ ಮತದಾನದಲ್ಲಿ ಭಾಗವಹಿಸುವಂತೆ ಮಾಡಬೇಕು. ಪ್ರತಿ ಮತವೂ ಅತ್ಯಮೂಲ್ಯವಾಗಿದ್ದು ಉತ್ತಮರ ಆಯ್ಕೆಗೆ ಎಲ್ಲರೂ ಮತದಾನ ಮಾಡಬೇಕು.

ಮತಗಟ್ಟೆ ಸ್ಥಳದ ಚಿಂತೆಯಿಲ್ಲ; ಈ ಭಾರಿಯ ಚುನಾವಣೆಯಲ್ಲಿ ಮತಚೀಟಿಯಲ್ಲಿ ಕ್ಯೂ.ಆರ್. ಕೋಡ್ ಮುದ್ರಿಸುವ ಮೂಲಕ ಮತಗಟ್ಟೆ ಸ್ಥಳದ ಮಾಹಿತಿಯನ್ನು ತಮ್ಮ ಮೊಬೈಲ್‌ನಿಂದಲೇ ಸೆರೆಹಿಡಿದು ಮತಗಟ್ಟೆಗೆ ಕರೆದುಕೊಂಡು ಹೋಗಲಿದ್ದು ನಗರದಲ್ಲಿನ ಮತದಾರರಿಗೆ ಅನುಕೂಲ ಕಲ್ಪಿಸಲಾಗಿದೆ. ಲೊಕೇಷನ್ ಮ್ಯಾಪ್ ಮೂಲಕ ನಿಮ್ಮ ಮತಗಟ್ಟೆಗೆ ಕರೆದುಕೊಂಡು ಹೋಗಲಿದ್ದು ಅದೇ ಮತಚೀಟಿ ತೋರಿಸಿ ವೋಟ್ ಮಾಡಬಹುದಾಗಿದೆ. ಈ ನಿಟ್ಟಿನಲ್ಲಿ ಮತದಾನ ಮಾಡೋಣ, ಬೇರೆಯವರನ್ನು ಪ್ರೇರೇಪಿಸೋಣ ಎಂಬ ಪ್ರತಿಜ್ಞೆಯನ್ನು ಯುವ ಮತದಾರರು ನೆರವೇರಿಸಬೇಕಾಗಿದೆ ಎಂದರು. ಚುನಾವಣಾ ರಾಯಭಾರಿ ಯುವ ಚಲನಚಿತ್ರ ನಟ ಪೃಥ್ವಿ ಕೆ.ಆರ್. ಶಾಮನೂರು ಉತ್ತಮ ನಾಯಕನ ಆಯ್ಕೆಗೆ ಪ್ರತಿಯೊಂದು ಮತ ಅಗತ್ಯ, ಒಂದು ಮತ ಕಡಿಮೆಯಾದರೆ ಸಮರ್ಥ ನಾಯಕನ ಆಯ್ಕೆ ಸಾಧ್ಯವಾಗದಿರಬಹುದು, ಈ ನಿಟ್ಟಿನಲ್ಲಿ ಎಲ್ಲರೂ ಮತದಾನ ಮಾಡಲೇಬೇಕಾಗಿದೆ ಎಂದರು.

ಶಿಮುಲ್ ನಿಂದ ಮತದಾನ ಜಾಗೃತಿಗೆ ಹಾಲಿನ ಪ್ಯಾಕೇಟ್ ಮೇಲೆ ಮೇ 7 ರಂದು ತಪ್ಪದೇ ಮತದಾನ ಮಾಡಬೇಕೆಂದು ಮುದ್ರಣ ಮಾಡಿದ್ದು ಇದನ್ನು ಬಿಡುಗಡೆ ಮಾಡಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ಅಧ್ಯಕ್ಷತೆ ವಹಿಸಿ ಮಾತನಾಡಿ ಈ ಭಾರಿ ಮಹಿಳೆಯರು ಹೆಚ್ಚು ಮತದಾನ ಮಾಡುವ ವಿಶ್ವಾಸವಿದ್ದು 100 ಮಹಿಳೆಯರು ಸೇರಿ ಮತದಾನ ಮಾಡಿದ ಬಗ್ಗೆ ಶಾಹಿ ಹಾಕಿದ ತೋರು ಬೆರಳು ತೋರಿಸುವ ಸೆಲ್ಫಿ ಕಳುಹಿಸಿದವರಿಗೆ ಸೂಕ್ತ ಬಹುಮಾನವನ್ನು ಸ್ವೀಪ್ ಸಮಿತಿಯಿಂದ ನೀಡಲಾಗುತ್ತದೆ ಎಂದರು. ಹಿನ್ನಲೆಗಾಯಕಿ ಹಾಗೂ ರಾಯಭಾರಿಯಾದ ಶೃತಿ ಪ್ರಹ್ಲಾದ್, ಜನಪದ ಕಲಾವಿದ ಯುಗಧರ್ಮ ರಾಮಣ್ಣ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ್, ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ಪಾಲಿಕೆ ಆಯುಕ್ತರಾದ ರೇಣುಕಾ, ಡಿಯುಡಿಸಿ ಯೋಜನಾ ನಿರ್ದೇಶಕ ಮಹಂತೇಶ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಹಿನ್ನಲೆ ಗಾಯಕಿ ಸೃಷ್ಠಿ ಶಾಮನೂರು, ಗಾಯಕರಾದ ರವೀಂದ್ರಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಕಲಾವಿದರು ಸಂಗೀತ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

## ಪ್ರತಿಯೊಬ್ಬರು ಮತದಾನ ಮಾಡುವಂತೆ ತಹಶೀಲ್ದಾರ್ ಬೀಬಿ ಫಾತಿಮ ಮನವಿ



» **ಚಿತ್ರದುರ್ಗ**

ಇದೇ ತಿಂಗಳ 26 ರಂದು ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಪ್ರತಿಯೊಬ್ಬರು ಮತದಾನ ಮಾಡುವ ಮೂಲಕ ಸಂವಿಧಾನ ನೀಡಿರುವ ಹಕ್ಕನ್ನು ಚಲಾಯಿಸಿ ಚುನಾವಣೆಯನ್ನು ಹಬ್ಬದ ರೀತಿಯಲ್ಲಿ ಸಂಭ್ರಮಿಸುವಂತೆ ಹೊಳಲ್ಕೆರೆ ತಹಶೀಲ್ದಾರ್ ಬೀಬಿಫಾತಿಮ ಜನತೆಯಲ್ಲಿ ಮನವಿ ಮಾಡಿದರು.ಹೊಳಲ್ಕೆರೆ ಕಸಬಾ ಹೋಬಳಿಯ ಲೋಕದೊಳಲು ಗ್ರಾಮದಲ್ಲಿ ನಡೆದ ಲಕ್ಷ್ಮಿ ರಂಗನಾಥಸ್ವಾಮಿಯ ರಥೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T